ಸಂಪುಟ : 10 ಸಂಚಿಕೆ: 213 ಪುಟ : 4+2 ಬೆಲೆ: 3.00 ಗುರುವಾರ ಅಕ್ಟೋಬರ್ 02 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 213 Pages : 4+2 Price : 3.00 Thursday October 02 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ದಸರಾ ಹಬ್ಬದ ಶುಭಾಶಯಗಳು



**ವಿಜಯಸಾಕ್ಷಿ** ಓದುಗರಿಗೆ, ಏಜೆಂಟರಿಗೆ, ಜಾಹೀರಾತುದಾರರಿಗೆ, ಅಭಿಮಾನಿಗಳಿಗೆ ಹಾಗೂ ನಾಡಿನ ಸಮಸ್ತ ಜನತೆಗೆ ವಿಜಯ ದಶಮಿ ಹಬ್ಬದ ಶುಭಾಶಯಗಳು.

**ಬಿಡುವು**

ನಾಡಹಬ್ಬ ವಿಜಯದಶಮಿ ಪ್ರಯುಕ್ತ ಇಂದು ಪತ್ರಿಕಾ ಕಾರ್ಯಾಲಯಕ್ಕೆ ರಜೆ ಇರುವುದರಿಂದ ನಾಳೆಯ ಸಂಚಿಕೆ ಪ್ರಕಟವಾಗುವುದಿಲ್ಲ.

–ಸಂಪಾದಕೀಯ ಮಂಡಳಿ

### ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

## ಹಿರಿಯ ನಾಗರಿಕರು ಯುವ ಪೀಳಿಗೆಗೆ ದಾರಿದೀಪ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಸಂಸ್ಕೃತಿಯಲ್ಲಿ ಹಿರಿಯ ನಾಗರಿಕರಿಗೆ ವಿಶಿಷ್ಟ ಗೌರವವನ್ನು ಹಾಗೂ ಪ್ರಾಶಸ್ತ್ಯವನ್ನು ಕೊಡಲಾಗಿದೆ. ಹಿರಿಯ ನಾಗರಿಕರ ಮಾರ್ಗದರ್ಶನ ಹಾಗೂ ಅನುಭವಗಳು ಯುವ ಪೀಳಿಗೆಗೆ ದಾರಿದೀಪವಾಗಿದ್ದು, ಸಂತಸಮಯ ಹಾಗೂ ಬಲಿಷ್ಠ ಸಮಾಜ ಕಟ್ಟುವಲ್ಲಿ ಹಿರಿಯ ನಾಗರಿಕರ ಪಾತ್ರ ಮುಖ್ಯವಾಗಿದೆ ಎಂದು ರಾಜ್ಯದ ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರುಗಳ ಸಹಯೋಗದಲ್ಲಿ ಬುಧವಾರ 'ಹಿರಿಯ ನಾಗರಿಕರು: ನಮ್ಮ ಆಶೋತ್ತರಗಳು, ನಮ್ಮ ಯೋಗಕ್ಷೇಮ ಮತ್ತು ನಮ್ಮ ಹಕ್ಕುಗಳನ್ನು ಸ್ಥಳೀಯ ಮತ್ತು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಬಲ್ಲ ಸಶಕ್ತರು' ಎಂಬ ಘೋಷವಾಕ್ಯದಡಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ–2025 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಹಿರಿಯ ನಾಗರಿಕರಿಗೆ ಸರಕಾರದಿಂದ ವಿವಿಧ ಯೋಜನೆಗಳ ಸೌಲಭ್ಯ ವಿತರಣೆ ಹಾಗೂ ಇನ್ನಿತರ ಸಮಸ್ಯೆಗಳು ಉಂಟಾದಲ್ಲಿ ಜಿಲ್ಲಾಡಳಿತ ಆ ಸಮಸ್ಯೆಗಳಿಗೆ ಸ್ಪಂದಿಸುತ್ತದೆ. ಪ್ರಭುವಿನೆಡೆಗೆ ಪ್ರಭುತ್ವ ಯಂತ್ರದಲ್ಲಿಯೂ ಸಹ ಹಿರಿಯ ನಾಗರಿಕರು ತಮ್ಮ ಸಮಸ್ಯೆಗಳ ಕುರಿತು ದೂರು ದಾಖಲಿಸಬಹುದಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.



ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಹಿರಿಯ ನಾಗರಿಕರನ್ನು ಗೌರವಿಸಲಾಯಿತು. ಹಿರಿಯ ನಾಗರಿಕರಿಗಾಗಿ ಆಯೋಜಿಸಲಾಗಿದ್ದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಗದಗ ಜಿಲ್ಲಾ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಪ್ರೊ. ಕೆ.ಎಚ್. ಬೇಲೂರ, ಗದಗ ಜಿಲ್ಲಾ ಹಿರಿಯ ನಾಗರಿಕರ ಸಂಘದ ಅಧ್ಯಕ್ಷ ಜಿ.ಎಸ್. ಹಿರೇಮಠ, ಕ.ರಾ.ಹಿ.ನಾ ಹಾಗೂ ನಿ.ನಾ. ಸಂಘದ ಎಸ್.ಕೆ. ಖಂಡೆಪ್ಪಗೌಡರ, ಗದಗ ಪ್ರೋಬಸ್ ಕ್ಲಬ್‌ನ ಬಿ.ಎಸ್. ಗೌಡರ, ಡಾ. ರಾಜೇಂದ್ರ ಗೋಡಬೋಲೆ, ಹಿರಿಯ ನಾಗರಿಕರ ಸಂಘದ ತಾಲೂಕಾ ಘಟಕದ ಅಧ್ಯಕ್ಷರು, ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘಗಳ, ಸ್ವಯಂ ಸೇವಾ ಸಂಸ್ಥೆಗಳ ಮುಖ್ಯಸ್ಥರು, ಬಿ.ಎಮ್. ಬಿಳೆಯಲಿ, ಹನುಮಂತಪ್ಪ ಗರಗ, ಬಸಯ್ಯ ಸ್ಥಾವರಮಠ, ಲೋಕಪ್ಪ ಸೇರಿದಂತೆ ವಿವಿಧ ಹಿರಿಯ ನಾಗರಿಕರು, ಗಣ್ಯರು ಹಾಜರಿದ್ದರು.

ನಾಡಗೀತೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮದಲ್ಲಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಕೆ. ಮಹಾಂತೇಶ್ ಸ್ವಾಗತಿಸಿದರು. ಪ್ರೊ. ಬಾಹುಬಲಿ ಜೈನರ್ ಕಾರ್ಯಕ್ರಮ ನಿರೂಪಿಸಿದರು.

> ಹಿರಿಯ ನಾಗರಿಕರನ್ನು ಪ್ರತಿಯೊಬ್ಬರೂ ಗೌರವಿಸಬೇಕು ಹಾಗೂ ಪೂಜ್ಯ ಭಾವನೆಯಿಂದ ಕಾಣಬೇಕು. ಹಿರಿಯ ನಾಗರಿಕರು ತಮ್ಮ ತಮ್ಮ ಕುಟುಂಬಗಳಲ್ಲಿ ಸಾಕ್ಷಿಪ್ರಜ್ಞೆಯಾಗಿ ಮಾರ್ಗದರ್ಶನ ಮಾಡುತ್ತಾರೆ. ಭಾರತೀಯ ಸಮಾಜದಲ್ಲಿ ಹಿರಿಯರಿಗೆ ಕೊಟ್ಟಿರುವ ಗೌರವದ ಸಂಸ್ಕೃತಿಯಿಂದ ಭಾರತ ದೇಶವು ಸುಸಂಸ್ಕೃತ ಹಾಗೂ ಸಂತೋಷಕರ ಸಮಾಜವನ್ನಾಗಿಸಲು ಕಾರಣವಾಗಿದೆ. ಹಿರಿಯ ನಾಗರಿಕರಿಗೆ ಸರ್ಕಾರದಿಂದ ವಿವಿಧ ಯೋಜನೆಗಳು ಜಾರಿಯಲ್ಲಿದ್ದು, ಅವುಗಳ ಸದ್ಬಳಕೆಯಾಗಬೇಕು ಎಮದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

## ರಾಹುಲ್ ಗಾಂಧಿಗೆ ಜೀವ ಬೆದರಿಕೆ: ಪ್ರಧಾನಿ, ಗೃಹ ಸಚಿವರ ಮೌನ ಪ್ರಶ್ನಿಸಿದ ಸಿಎಂ ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಬಿಜೆಪಿ ಮತ್ತು ಸಂಘ ಪರಿವಾರದ ವಿರುದ್ಧ ನಿರಂತರ ಧ್ವನಿಯೆತ್ತುತ್ತಿರುವ ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿಯವರ ಎದೆಗೆ ಗುಂಡು ಹೊಡೆಯುತ್ತೇವೆ, ಹುಷಾರ್..!! ಎಂದು ಬಿಜೆಪಿ ವಕ್ತಾರರೊಬ್ಬರು ಬಹಿರಂಗವಾಗಿ ಜೀವ ಬೆದರಿಕೆ ಒಡ್ಡಿರುವ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರ ಮೌನವನ್ನು ನೋಡಿದರೆ ಹೇಳಿಕೆಯ ಬಗ್ಗೆ ಅವರಿಗೂ ಸಮ್ಮತಿ ಇದೆಯೇ ಎಂಬ ಪ್ರಶ್ನೆ ಸಹಜವಾಗಿ ಎಲ್ಲರಲ್ಲೂ ಮೂಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಬೆದರಿಕೆ ಒಡ್ಡಿ ಸೈದ್ಧಾಂತಿಕ ವಿರೋಧಿಗಳ ಧ್ವನಿ ಅಡಗಿಸುವುದು, ಅದಕ್ಕೂ ಬಗ್ಗದಿದ್ದಾಗ ಅವರನ್ನೇ ಇಲ್ಲವಾಗಿಸುವುದು ಬಿಜೆಪಿ ಮತ್ತು ಸಂಘಪರಿವಾರಕ್ಕೆ ಹೊಸದೇನಲ್ಲ. ಮೊದಲೆಲ್ಲ ತೆರೆಮರೆಯಲ್ಲಿ ನಿಂತು ತಮ್ಮ ವಿರೋಧಿಗಳ ಹತ್ಯೆಗಳಿಗೆ ಬೆಂಬಲ ನೀಡುತ್ತಾ ಬಂದವರು, ಈಗ ನೇರಾ ನೇರವಾಗಿ ಅಖಾಡಕ್ಕೆ ಇಳಿದಿದ್ದಾರೆ. ಎದುರಾಳಿಗಳನ್ನು ಸಂವಾದ, ಚರ್ಚೆಗಳ ಮೂಲಕ ಸೈದ್ಧಾಂತಿಕವಾಗಿ ಎದುರಿಸಲಾಗದವರು ದೈಹಿಕವಾಗಿ ಮುಗಿಸಲು ಹೊರಟಿರುವುದು ಅವರ ಬೌದ್ಧಿಕ ದಿವಾಳಿತನವನ್ನು ತೋರಿಸುತ್ತದೆ ಎಂದಿದ್ದಾರೆ.

ಸಂಘಪರಿವಾರದ ದುರುಳರಿಂದ ಪ್ರಾಣ ಕಳೆದುಕೊಂಡವರು ಒಬ್ಬರಾ? ಇಬ್ಬರಾ? ಮಹಾತ್ಮ ಗಾಂಧಿಯವರಿಂದ ಆರಂಭಗೊಂಡ ಈ ಹತ್ಯಾ ಸರಣಿ ಗೋವಿಂದ ಪನ್ಸಾರೆ, ನರೇಂದ್ರ ದಾಬೋಲ್ಕರ್, ಎಂ.ಎಂ. ಕಲಬುರ್ಗಿ, ಗೌರಿ ಲಂಕೇಶ್ ಹೀಗೆ ಪಟ್ಟಿ ಬೆಳೆಯುತ್ತಾ ಹೋಗುತ್ತದೆ. ಇವರೆಲ್ಲರ ಕೊಲೆಗಾರರಿಗೂ ತಮಗೂ ಸಂಬಂಧವಿಲ್ಲವೆಂದು ಹೇಳಿ ಸಂಘಪರಿವಾರದ ನಾಯಕರು ಸುಲಭದಲ್ಲಿ ತಲೆತೊಳೆದುಕೊಂಡರೂ, ಅವರ ಕೈಗಳಿಗಂಟಿದ ರಕ್ತದ ಕಲೆಗಳನ್ನು ತೊಳೆಯಲಾಗಲಿಲ್ಲ ಎಂದು ಹೇಳಿದ್ದಾರೆ.

ರಾಹುಲ್ ಗಾಂಧಿಯವರ ಕುಟುಂಬಕ್ಕೆ ಪ್ರಾಣ ಬೆದರಿಕೆ ಇದು ಮೊದಲಲ್ಲ. ಇಂತಹ ಕೊಲೆಗಡುಕರಿಂದಲೇ ರಾಹುಲ್ ಅವರು ತಮ್ಮ ಅಜ್ಜಿ ಮತ್ತು ಅಪ್ಪನನ್ನು ಕಳೆದುಕೊಂಡವರು. ರಾಹುಲ್ ಗಾಂಧಿ ಈಗ ಒಬ್ಬಂಟಿ ಅಲ್ಲ, ಅವರ ಬೆಂಬಲಕ್ಕೆ ಕೋಟ್ಯಂತರ ಸಂಖ್ಯೆಯ ಕಾರ್ಯಕರ್ತರಿದ್ದಾರೆ ಎನ್ನುವುದು ಬಿಜೆಪಿಯ ಕೊಲೆಗಡುಕ ಮನಸ್ಸುಗಳಿಗೆ ತಿಳಿದಿರಲಿ ಎಂದು ಸಿಎಂ ತಿಳಿಸಿದ್ದಾರೆ.

## ಮತದಾರರ ಪಟ್ಟಿ ಕ್ರಮಬದ್ಧವಾಗಿ ಸಿದ್ಧವಾಗಲಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

2026ರಲ್ಲಿ ಜರುಗಲಿರುವ ಕರ್ನಾಟಕ ವಿಧಾನ ಪರಿಷತ್ತಿನ ಪಶ್ಚಿಮ ಪದವೀಧರರ ಮತಕ್ಷೇತ್ರದ ಮತದಾರರ ಪಟ್ಟಿ ತಯಾರಿಕೆ ಆರಂಭವಾಗಲಿದ್ದು, ಅರ್ಹ ಮತದಾರರ ಸೇರ್ಪಡೆಗೆ ಅವಕಾಶವಿದೆ. ಮತದಾರರ ಪಟ್ಟಿಯು ಕ್ರಮಬದ್ಧವಾಗಿ ಮತ್ತು ನ್ಯಾಯಬದ್ಧವಾಗಿ ತಯಾರಾಗುವಂತೆ ಮಾಡುವಲ್ಲಿ ರಾಜಕೀಯ ಪಕ್ಷಗಳು, ಸಾರ್ವಜನಿಕರು ಸಹಕಾರ ನೀಡಬೇಕೆಂದು ಪಶ್ಚಿಮ ಪದವೀಧರ ಮತಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ ಜರುಗಿಸಿ, ಅಧ್ಯಕ್ಷತೆ ವಹಿಸಿ, ಮಾತನಾಡಿದರು.




ಕರ್ನಾಟಕ ಪಶ್ಚಿಮ ಪದವೀಧರ ಮತಕ್ಷೇತ್ರದ ಮತದಾರರ ನೋಂದಣಾಧಿಕಾರಿ ಆಗಿರುವ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರು ಮತದಾರರ ಪಟ್ಟಿ ತಯಾರಿಕೆ ಕುರಿತು ಸೂಚನೆಗಳನ್ನು ಹೊರಡಿಸಿದ್ದು, ಅವುಗಳ ಪ್ರತಿಯನ್ನು ಎಲ್ಲ ನೋಂದಾಯಿತ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ನೀಡಲಾಗಿದೆ. ಈ ಕುರಿತು ಅರ್ಹ ಪದವಿಧರ ಮತದಾರರಲ್ಲಿ ಜಾಗೃತಿ ಮೂಡಿಸಿ, ಅವರು ನಿಯಮಾನುಸಾರ ಸದರಿ ಮತದಾರರ ಪಟ್ಟಿಗೆ ಸೇರ್ಪಡೆ ಆಗುವಂತೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ, ಭಾರತೀಯ ಜನತಾ ಪಕ್ಷದ ಪ್ರತಿನಿಧಿ ಆರ್.ಎಂ. ಕಲ್ಯಾಣಶೆಟ್ಟಿ, ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪ್ರತಿನಿಧಿ ಪ್ರಕಾಶ ಹಳಿಯಾಳ, ಜನತಾದಳ (ಜಾ) ಮಹಾನಗರ ಅಧ್ಯಕ್ಷ ಗುರುರಾಜ ಹುಣಸಿಮರದ, ದೇವರಾಜ ಕಂಬಳಿ, ಬಹುಜನ ಸಮಾಜ ಪಕ್ಷ ಪ್ರತಿನಿಧಿ ನಿಂಗಪ್ಪ, ಆಮ್ ಆದ್ಮಿ ಪಕ್ಷದ ಪ್ರತಿನಿಧಿ ಅವಿನಾಶ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರಮುಖರು ಭಾಗವಹಿಸಿದ್ದರು.

### ಕಪ್ಪತಗಿರಿ ಫೌಂಡೇಶನ್ ವತಿಯಿಂದ ಶಿಕ್ಷಕರ ಸಮ್ಮೇಳನ, ರಾಜ್ಯ ಮಟ್ಟದ ವಿಚಾರ ಸಂಕಿರಣ

## ಶಿಕ್ಷಕರ ಕಾರ್ಯ ಮಕ್ಕಳಿಗೆ ಪೂರಕವಾಗಿರಬೇಕು



■ವಿಜಯಸಾಕ್ಷಿ ಸುದ್ದಿ, ಗದಗ

ತಂದೆ-ತಾಯಿಗಳು ಹಾಕಿಕೊಟ್ಟ ಸಂಸ್ಕಾರ, ಗುರು ಕಲಿಸಿದ ಅಕ್ಷರ ಜ್ಞಾನದ ಹಾದಿಯಲ್ಲಿ ನಡೆದಿರುವ ವ್ಯಕ್ತಿ ಯಾರೇ ಆಗಿದ್ದರೂ ಅವರು ಉನ್ನತ ಮಟ್ಟದಲ್ಲಿ ಬಾಳಲು ಸಾಧ್ಯ. ಇಂತಹ ಕಾರ್ಯಗಳು ಆಗುತ್ತಲೇ ಇರಬೇಕು ಎಂದು ಶ್ರೀ ಮ.ನಿ.ಪ್ರ. ಡಾ. ಹಿರಿಯ ಶಾಂತವೀರ ಮಹಾಸ್ವಾಮಿಗಳು ನುಡಿದರು.

ಕಪ್ಪತಗಿರಿ ಫೌಂಡೇಶನ್, ಕಪ್ಪತ್ತಗಿರಿ ಸಾಹಿತ್ಯ ಶಿಕ್ಷಣ ಮತ್ತು ಸಾಂಸ್ಕೃತಿಕ ಕಲಾ ವೇದಿಕೆ ವತಿಯಿಂದ ಶಿಕ್ಷಕರ ದಿನಾಚರಣೆಯ ಪ್ರಯುಕ್ತ ಇತ್ತೀಚೆಗೆ ಜರುಗಿದ ಶಿಕ್ಷಕರ ಸಮ್ಮೇಳನ, ರಾಜ್ಯ ಮಟ್ಟದ ವಿಚಾರ ಸಂಕಿರಣ, ಪುಸ್ತಕ ಬಿಡುಗಡೆ, ಜಿಲ್ಲಾ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಡಾ. ಪಂಚಯ್ಯ ಹಿರೇಮಠ ಮಾತನಾಡಿ, ಶಿಕ್ಷಕರಾದವರು ನಾವು ನಮ್ಮನ್ನು ಅವಲೋಕಿಸಿಕೊಳ್ಳಬೇಕು. ನಾವು ಮಾಡುವ ಕಾರ್ಯ ಮಕ್ಕಳಿಗಾಗಿ ಪೂರಕವಾಗಿರಬೇಕು. ಫಲಾಪೇಕ್ಷೆ ಬಯಸದೆ ಕರ್ತವ್ಯ ಮಾಡಿದಾಗ ತಕ್ಕ ಪ್ರತಿಫಲ ದೊರೆಯುತ್ತದೆ ಎಂದರು.

ಶರದ್ ರಾವ್ ಹುಯಿಲಗೋಳ ಮಾತನಾಡಿ, ಆಗಿನ ಕಾಲದಲ್ಲಿ ಸಾವಿತ್ರಿ ಬಾಯಿ ಫುಲೆ ಅಕ್ಷರದ ಅವ್ವ ಆದರೆ, ನಮ್ಮೂರಿನ ಹೆಮ್ಮೆ ಚಂದ್ರಕಲಾ ಇಟಗಿಮಠ ಅವರು ಆಧುನಿಕ ಸಾವಿತ್ರಿ ಬಾಯಿ ಎಂದು ಅಭಿಪ್ರಾಯಪಟ್ಟರು.

ಕೊಟ್ರೇಶ ಜವಳಿ ರಚಿಸಿದ 'ರೈತನ ಬೆವರ ಹನಿಗಳು' ಕೃತಿಯನ್ನು ರವೀಂದ್ರನಾಥ ದೊಡ್ಡಮೇಟಿ ಲೋಕಾರ್ಪಣೆಗೊಳಿಸಿದರು. ಮಹೇಶ. ಎಸ್.ಹೆಚ್ ಪುಸ್ತಕ ಪರಿಚಯಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ವಿದ್ಯಾದಾನ ಸಮಿತಿಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ಸಿ.ಬಿ. ಪಲ್ಲೇದ, ಮಲ್ಲಿಕಾರ್ಜುನ ಖಂಡಮ್ಮನವರ, ಗವಿಸಿದ್ದಯ್ಯ ಹಳ್ಳಿಕೇರಿಮಠ, ರತ್ನಾ ಬದಿ, ಬಸಮ್ಮ ಕೋಟಿ, ಡಾ. ಸಾಮುದ್ರಿ, ಡಾ. ವಿಜಯಲಕ್ಷ್ಮೀ ಗೇಟಿಯವರ, ಡಾ. ಪ್ರವೀಣ ಕರಿಯಪ್ಪನವರ, ರಘುನಂದನ ಕೊಪ್ಪರ, ಎಂ.ಎಸ್. ಕಡಿವಾಲ ಮತ್ತಿತರರು ಉಪಸ್ಥಿತರಿದ್ದರು.

ನಂತರ ನಡೆದ ಗೋಷ್ಠಿಯ ಅಧ್ಯಕ್ಷತೆಯನ್ನು ಡಾ. ಚಂದ್ರಪ್ಪ ಸೊಬಟಿ ವಹಿಸಿದ್ದರು. ಡಾ. ಲಿಂಗರಾಜ ನಡವಣಿ, ಡಾ. ರಜೀಯಾಬೇಗಂ ನದಾಫ್ ಪಾಲ್ಗೊಂಡಿದ್ದರು. ಡಾ. ವಿಜಯಲಕ್ಷ್ಮೀ ಗೇಟಿಯವರ, ಡಾ. ಪ್ರವೀಣ ಕರೆಪ್ಪನವರ ಗೋಷ್ಠಿಗಳನ್ನು ನಡೆಸಿಕೊಟ್ಟರು. ನೀಲಮ್ಮ ಅಂಗಡಿ ಪ್ರಾರ್ಥಿಸಿದರು. ಶಿಲ್ಪಾ ಮ್ಯಾಗೇರಿ ಸ್ವಾಗತಿಸಿದರು. ತೋಟಯ್ಯ ಗುಡ್ಡಿಮಠ ಮಾತನಾಡಿದರು. ಎರಡನೇ ದಿನದ ವಿಚಾರಸಂಕಿರಣವನ್ನು ರಮೇಶ ಲಮಾಣಿ ಉದ್ಘಾಟಿಸಿದರು. ಡಾ. ಬಿ.ಎಲ್. ಚವ್ಹಾಣ ಅಧ್ಯಕ್ಷತೆ ವಹಿಸಿದ್ದರು. ಡಾ. ನಿಂಗು ಸೊಲಗಿ ಅಧ್ಯಕ್ಷತೆಯಲ್ಲಿ 2ನೇ ಗೋಷ್ಠಿ ಜರುಗಿತು. ಡಾ. ರಜಿಯಾಬೇಗಂ, ಪ್ರಿಯಾಂಕಾ ನಡುವಿನಮನಿ, ಪ್ರಿಯಾ ಹುಯಿಲಗೋಳ ಪ್ರಬಂಧ ಮಂಡಿಸಿದರು.

> ಚಂದ್ರಕಲಾ ಇಟಗಿಮಠ ಮಾತನಾಡಿ, ಒಬ್ಬ ಸಾಧಕರಿಗೆ ಹಲವಾರು ವಿಘ್ನಗಳು ಬರುತ್ತವೆ. ಸಂಘಟನೆ ಎಂದರೆ ಮುಳ್ಳಿನ ಮೇಲೆ ನಡೆದಂತೆ. ಆದರೂ ಒಳ್ಳೆಯ ಸಮಾಜಮುಖಿ ಕಾರ್ಯಗಳನ್ನು ಮಾಡುವವರಿಗೆ ಸ್ವತಃ ದೇವರೇ ಸಹಾಯ ಹಸ್ತ ನೀಡುತ್ತಾನೆ ಎಂದರು.

### 2025ನೇ ಸಾಲಿನ 'ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ–ಕರ್ನಾಟಕ' ಪ್ರಕಟ

## ಲೇಖಕ ಡಾ. ರಾಮಚಂದ್ರ ಗುಹಾಗೆ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹೆಸರಾಂತ ಭಾರತೀಯ ಇತಿಹಾಸಕಾರ, ಅಂಕಣಕಾರ ಮತ್ತು ಚಿಂತಕರಾದ ಡಾ. ರಾಮಚಂದ್ರ ಗುಹಾ ಅವರನ್ನು 2025ನೇ ಸಾಲಿನ ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿಕರ್ನಾಟಕಕ್ಕೆ ಕರ್ನಾಟಕ ಸರ್ಕಾರ ಆಯ್ಕೆ ಮಾಡಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ಪ್ರತಿ ವರ್ಷ ನೀಡಲಾಗುವ ಈ ಪ್ರಶಸ್ತಿಯನ್ನು, ಗಾಂಧೀಜಿಯವರ ಜೀವನ ಮೌಲ್ಯಗಳನ್ನು ಸಮಾಜದಲ್ಲಿ ಹರಡಲು ಮಹತ್ತರ ಕೊಡುಗೆ ನೀಡಿದ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ ಪ್ರದಾನ ಮಾಡಲಾಗುತ್ತದೆ.



ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಜಯಂತಿಯನ್ನು ರಾಜ್ಯಾದ್ಯಂತ ಅರ್ಥಪೂರ್ಣವಾಗಿ, ಜನಸಾಮಾನ್ಯರು, ಶಾಲಾ–ಕಾಲೇಜು ವಿದ್ಯಾರ್ಥಿಗಳ ಪಾಲ್ಗೊಳ್ಳುವಿಕೆಯಿಂದ ಆಚರಿಸಲು ರಾಜ್ಯ ಸರ್ಕಾರವು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಈ ಆಚರಣೆಯ ಅಂಗವಾಗಿ ಗಾಂಧೀಜಿಯವರ ತತ್ವ, ಮೌಲ್ಯ ಹಾಗೂ ಸಮಾಜಮುಖಿ ಚಿಂತನೆಗಳನ್ನು ಜನಮನಗಳಲ್ಲಿ ಬಿತ್ತುವಲ್ಲಿ ಮಹತ್ವದ ಪಾತ್ರವಹಿಸಿರುವ ಡಾ. ರಾಮಚಂದ್ರ ಗುಹಾ ಅವರನ್ನು ಈ ವರ್ಷದ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಡಾ. ಗುಹಾ ಅವರು ಭಾರತದ ಸಮಕಾಲೀನ ಇತಿಹಾಸ, ರಾಜಕೀಯ ಚಳವಳಿಗಳು, ಪರಿಸರ ಹೋರಾಟಗಳು ಹಾಗೂ ಕ್ರಿಕೆಟ್ ಕುರಿತ ತಮ್ಮ ಅಧ್ಯಯನ ಮತ್ತು ಗ್ರಂಥ ರಚನೆಗಳ ಮೂಲಕ ಅಂತರರಾಷ್ಟ್ರೀಯ ಮಟ್ಟದಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದಾರೆ.

ರಾಜ್ಯ ಸರ್ಕಾರವು ಈ ಪ್ರಶಸ್ತಿಯ ಮೂಲಕ ಯುವ ಪೀಳಿಗೆಗೆ ಗಾಂಧೀಜಿಯವರ ಆದರ್ಶಗಳನ್ನು ಪರಿಚಯಿಸಿ, ಸತ್ಯ, ಅಹಿಂಸೆ, ಶಾಂತಿ ಮತ್ತು ಸೇವಾ ಮನೋಭಾವನೆಗಳನ್ನು ಬಲಪಡಿಸಲು ಬದ್ಧವಾಗಿದೆ. ಡಾ. ರಾಮಚಂದ್ರ ಗುಹಾ ಅವರಿಗೆ ಈ ಪ್ರಶಸ್ತಿ ಪ್ರದಾನವಾಗುವುದು, ಸಮಾಜದಲ್ಲಿ ಗಾಂಧೀಜಿಯವರ ಆದರ್ಶಗಳ ಪ್ರಚುರತೆ, ಸಂವಾದ ಮತ್ತು ಅಧ್ಯಯನಕ್ಕೆ ಪ್ರೇರಣೆಯಾದಂತಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಹೇಮಂತ್ ಎಂ.ನಿಂಬಾಳ್ಕರ್ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> ಡಾ. ಗುಹಾ ಅವರ ಕೃತಿಗಳು ಇತಿಹಾಸ ಅಧ್ಯಯನವನ್ನು ಶ್ರೀಮಂತಗೊಳಿಸುವುದಷ್ಟೇ ಅಲ್ಲದೆ, ಸಾಮಾನ್ಯ ಓದುಗರಿಗೂ ಸುಲಭವಾಗಿ ತಲುಪುವ ಶೈಲಿಯಲ್ಲಿರುವುದರಿಂದ ಸಮಾಜದಲ್ಲಿ ಚಿಂತನ–ಮನನಕ್ಕೆ ಪ್ರೇರಣೆಯಾಗಿವೆ.
>
> ವಿಶೇಷವಾಗಿ ಗಾಂಧೀ ತತ್ವಗಳನ್ನು ಆಳವಾಗಿ ವಿಶ್ಲೇಷಿಸಿ ಅವನ್ನು ಸಮಕಾಲೀನ ಭಾರತಕ್ಕೆ ಸಂಬಂಧಿಸಿದಂತೆ ಅರ್ಥೈಸುವಲ್ಲಿ ಡಾ. ಗುಹಾ ಅವರಿಗೆ ವಿಶಿಷ್ಟ ಸ್ಥಾನವಿದೆ. ಅವರ ಗಾಂಧೀಜಿಯವರ ಎರಡು ಸಂಪುಟಗಳ ಜೀವನಚರಿತ್ರೆ ಕನ್ನಡ ಸೇರಿದಂತೆ ಅನೇಕ ಭಾಷೆಗಳಿಗೆ ಅನುವಾದಗೊಂಡಿದೆ.

## ಬೈಕ್ ಸವಾರರೇ ಎಚ್ಚರ: ನಿಮ್ಮಿಂದ ಈ ಮಿಸ್ಟೇಕ್ ಆದ್ರೆ ಬೀಳುತ್ತೆ ಕ್ರಿಮಿನಲ್ ಕೇಸ್ !

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಇತ್ತೀಚಿಗೆ ನಗರದಲ್ಲಿ ಪೊಲೀಸರು ವಾಹನ ತಪಾಸಣೆಗೆ ಮುಂದಾಗಿದ್ದು, ಈ ವೇಳೆ ಹಲವು ಬೈಕ್ ಸವಾರರು ತಮ್ಮ ಬೈಕ್ ನಂಬರ್ ಪ್ಲೇಟ್ ಅನ್ನು ಮರೆಮಾಚಿ ಸಂಚಾರ ಮಾಡುತ್ತಿರುವುದು ಕಂಡು ಬಂದಿದೆ.

ಇದರಿಂದ ಎಚ್ಚೆತ್ತ ಪೊಲೀಸರು ಅಂತಹ ಬೈಕ್ ಸವಾರರನ್ನ ಪತ್ತೆ ಹಚ್ಚಿ ಅವರ ಮೇಲೆ ವಂಚನೆ ಪ್ರಕರಣ ದಾಖಲು ಮಾಡುತ್ತಿದ್ದಾರೆ. ಬೈಕ್ ನಂಬರ್ ಪ್ಲೇಟ್ ಮರೆಮಾಚುವುದರಿಂದ ಟ್ರಾಫಿಕ್ ಪೊಲೀಸರಿಗೆ ಬೈಕ್ ಮಾಹಿತಿ ಸಿಗುವುದಿಲ್ಲ. ಎಐ ಕ್ಯಾಮರಾಗೆ ಬೈಕ್ ಪತ್ತೆಯಾಗುವುದಿಲ್ಲ.

ಕವನ

## ದಸರಾ



ನವ ರಾತ್ರಿಗಳು
ಮೈಸೂರ ದಸರಾಗಳು
ನವರಾತ್ರಿ ಉತ್ಸವಗಳು
ಎಷ್ಟೊಂದು ಸುಂದರವು
ಹಬ್ಬದ ಸಡಗರವು
ನವ ಅವಾತರಗಳು
ನವ ಬಣ್ಣಗಳು
ಹಳದಿ ಬಣ್ಣಗಳು
ಶೈಲಪುತ್ರಿ ದುರ್ಗೆ
ಹಸಿರು ಬಣ್ಣಗಳು
ಬ್ರಹ್ಮಚಾರಿಣಿ ದುರ್ಗೆ
ಬೂದು ಬಣ್ಣಗಳು
ಚಂದ್ರಘಂಟಾ ದುರ್ಗೆ
ಕೇಸರಿ ಬಣ್ಣಗಳು
ಕೂಷ್ಮಾಂಡದೇವಿ ದುರ್ಗೆ
ಬಿಳಿ ಬಣ್ಣಗಳು
ಸ್ಕಂದ ಮಾತಾ ದುರ್ಗೆ
ಕೆಂಪು ಬಣ್ಣಗಳು
ಕಾತ್ಯಾಯಿನಿ ದುರ್ಗೆ
ನೀಲಿ ಬಣ್ಣಗಳು
ಕಾಳರಾತ್ರಿ ಮಹಾಮಾಯೇ
ಗುಲಾಬಿ ಬಣ್ಣಗಳು
ಮಹಾಗೌರಿ ತಾಯಿ
ನೇರಳೆ ಬಣ್ಣಗಳು
ಸಿದ್ಧಿಧಾತ್ರಿ ತಾಯಿ
ದೇವಿಯ ಅವತಾರಗಳು
ನವರಾತ್ರಿಯ ದಿನಗಳು
ಆಯುಧ ಪೂಜೆಗಳು
ವಿಜಯದಶಮಿ ಹಬ್ಬಗಳು
ದಸಾರ ಹಬ್ಬದ ಸಂಭ್ರಮಗಳು.

– ವಿ.ಎಂ.ಎಸ್. ಗೋಪಿ
ಬೆಂಗಳೂರು.

### ಗಾಂಧೀಜಿ ಅವರ ನೀತಿಗಳ ಬೆಳಕಿನಲ್ಲಿ; ಜನಪ್ರತಿನಿಧಿಗಳು ಜನರೊಂದಿಗೆ ಸಂಪರ್ಕ ಹೆಚ್ಚಿಸಲಿ

# ಜನಪ್ರತಿನಿಧಿ ತನ್ನನ್ನು ಜನಸೇವಕನೆಂದು ಭಾವಿಸಲಿ

ಪ್ರಜಾಪ್ರಭುತ್ವದ ಹೃದಯವೇ ಜನಪ್ರತಿನಿಧಿ ಮತ್ತು ಜನರ ನಡುವಿನ ಸಜೀವ ಸಂಪರ್ಕ. ಜನರಿಂದ ಜನರಿಗಾಗಿ ಎಂಬುದು ಪ್ರಜಾಪ್ರಭುತ್ವದ ಘೋಷಣೆ. ಆದರೆ ಜನರು ತಮ್ಮ ಪ್ರತಿನಿಧಿಗಳನ್ನು ಕೇವಲ ಚುನಾವಣೆಯ ಸಮಯದಲ್ಲಿ ಮಾತ್ರ ನೋಡುತ್ತಿರುವ ಸ್ಥಿತಿ ನಿರ್ಮಾಣವಾಗಿದೆ. ಅಭಿವೃದ್ಧಿ ವಿಚಾರ, ಜನಸಾಮಾನ್ಯರ ಸಮಸ್ಯೆಗಳು, ದೈನಂದಿನ ಗೋಳಾಟಗಳು ಇವೆಲ್ಲವನ್ನು ಆಲಿಸುವ ಬದಲು, ಜನಪ್ರತಿನಿಧಿಗಳು ಹೆಚ್ಚು ಸಮಯವನ್ನು ಪಕ್ಷದ ರಾಜಕೀಯದಲ್ಲಿ, ಅಧಿಕಾರದ ರಾಜಕಾರಣದಲ್ಲಿ ಮತ್ತು ವೈಯಕ್ತಿಕ ಬಲವರ್ಧನೆಗೆ ಮುಡಿಪಾಗಿಟ್ಟಿದ್ದಾರೆ.

ಮಹಾತ್ಮ ಗಾಂಧೀಜಿ ಅವರು ಹೇಳಿರುವ ಮಾತಿಗೆ ಸದ್ಯ ರಾಜಕೀಯ ನಡೆಯುತ್ತಿರುವ ಸ್ಥಿತಿಗತಿಯನ್ನು ನೋಡಿದರೆ ಒಂದಕ್ಕೊಂದು ಸಂಬಂಧವೇ ಇಲ್ಲ ಎನ್ನುವಂತಹ ವಾತಾವರಣ ದೇಶದಲ್ಲಿ ನಿರ್ಮಾಣವಾಗಿದೆ. ಗಾಂಧೀಜಿ ಹೇಳಿದ ಮಾತು, ನಾಯಕನು ಜನರ ಸೇವಕನಾಗಿರಬೇಕು, ಆಳುವವನಾಗಿರಬಾರದು. ಇಂದಿನ ರಾಜಕೀಯ ಪರಿಸ್ಥಿತಿ ಈ ಮಾತಿಗೆ ಎಷ್ಟು ಹೊಂದಿಕೊಂಡಿದೆ ಎಂಬುದನ್ನು ಮನವರಿಕೆ ಮಾಡಿಕೊಳ್ಳುವ ಪ್ರಸಂಗ ಎದುರಾಗಿದೆ.

ಹೌದು, ಭಾರತದ ಪ್ರಜಾಸತ್ತಾತ್ಮಕ ವ್ಯವಸ್ಥೆಯ ಅಸ್ತಿತ್ವ ಮತ್ತು ಯಶಸ್ಸು ಜನಪ್ರತಿನಿಧಿಗಳ ಜನಸಂಪರ್ಕದ ಮೇಲೆ ಅವಲಂಬಿತವಾಗಿದೆ. ಮತದಾನದ ಮೂಲಕ ಅಧಿಕಾರಕ್ಕೆ ಬಂದ ಜನಪ್ರತಿನಿಧಿಗಳು ಜನರ ಸಮಸ್ಯೆಗಳನ್ನು ಆಲಿಸುವುದು, ಅವರಿಗೆ ಸೇವೆ ಸಲ್ಲಿಸುವುದು, ಅಭಿವೃದ್ಧಿಯ ದಿಕ್ಕಿನಲ್ಲಿ ಕಾರ್ಯಕ್ರಮಗಳನ್ನು ರೂಪಿಸುವುದು ಇವರ ಮುಖ್ಯ ಕರ್ತವ್ಯ. ಆದರೆ, ಇಂದಿನ ರಾಜಕೀಯ ವ್ಯವಸ್ಥೆಯಲ್ಲಿ ಜನಸಂಪರ್ಕ ದಿನೇ ದಿನೇ ಕುಗ್ಗುತ್ತಿರುವುದು ಕಂಡುಬರುತ್ತಿದೆ. ಚುನಾವಣೆಯ ಸಂದರ್ಭದಲ್ಲಿ ಮಾತ್ರ ಜನರನ್ನು ಸಂಪರ್ಕಿಸಿ, ನಂತರ ದೂರವಾಗುವ ಪ್ರಕ್ರಿಯೆ ಪ್ರಜಾಸತ್ತಾತ್ಮಕ ವ್ಯವಸ್ಥೆಯ ಮೇಲೆ ಜನರ ವಿಶ್ವಾಸವನ್ನು ಕುಂದಿಸುತ್ತಿದೆ.



ಮಹಾತ್ಮ ಗಾಂಧೀಜಿಯವರ ರಾಜಕೀಯ ತತ್ವಗಳನ್ನು ಪ್ರಸ್ತುತ ವ್ಯವಸ್ಥೆಗೆ ಹೊಂದಿಸಿ ನೋಡಿದಾಗ ಕೆಲವು ಪ್ರಮುಖ ಅಂಶಗಳು ಸ್ಪಷ್ಟವಾಗುತ್ತವೆ. ಜನಸೇವೆಯೇ ರಾಜಕೀಯದ ಗುರಿ. ಗಾಂಧೀಜಿ ರಾಜಕೀಯವನ್ನು ಅಧಿಕಾರದ ಹಂಬಲವಾಗಿ ನೋಡಲಿಲ್ಲ. ಅವರು ರಾಜಕೀಯವನ್ನು ನೈತಿಕ ಶಕ್ತಿಯ ಕಾರ್ಯಕ್ಷೇತ್ರವೆಂದು ಪರಿಗಣಿಸಿದರು. ಜನರ ದುಃಖ–ಸಂತಾಪಗಳಿಗೆ ಸ್ಪಂದಿಸುವುದು, ಅವರ ಅಭಿವೃದ್ಧಿಗೆ ಶ್ರಮಿಸುವುದು ರಾಜಕಾರಣಿಯ ಕರ್ತವ್ಯವೆಂದು ಅವರು ಸಾರಿದರು. ಅಹಿಂಸೆ ಮತ್ತು ಸತ್ಯ, ರಾಜಕೀಯದಲ್ಲಿ ಸತ್ಯ ಮತ್ತು ಅಹಿಂಸೆ ಅಡಿಪಾಯವಾಗಬೇಕು ಎಂದು ಗಾಂಧೀಜಿ ನಂಬಿದ್ದರು.

ಪ್ರಸ್ತುತ ರಾಜಕೀಯದಲ್ಲಿ ಸುಳ್ಳು ಭರವಸೆಗಳು, ಹಿಂಸೆ, ಧ್ರುವೀಕರಣ ಹೆಚ್ಚುತ್ತಿರುವ ಸಂದರ್ಭದಲ್ಲಿ ಈ ತತ್ವಗಳು ಬಹಳ ಪ್ರಸ್ತುತ. ಪ್ರಸ್ತುತ ರಾಜಕೀಯದಲ್ಲಿ ಜನಸಂಪರ್ಕದ ಕೊರತೆ, ಚುನಾವಣೆಯ ನಂತರ ಅನೇಕ ಜನಪ್ರತಿನಿಧಿಗಳು ತಮ್ಮ ಕ್ಷೇತ್ರದ ಜನರೊಂದಿಗೆ ಸಂಪರ್ಕ ಕಡಿಮೆ ಮಾಡುತ್ತಾರೆ. ಇದು ಜನರಲ್ಲಿ ಅಸಮಾಧಾನವನ್ನು ಉಂಟುಮಾಡಿ ರಾಜಕೀಯದ ಮೇಲಿನ ನಂಬಿಕೆಯನ್ನು ಕುಗ್ಗಿಸುತ್ತದೆ. ಅಭಿವೃದ್ಧಿಯ ಅಸಮತೋಲನ, ಕೆಲವೆಡೆ ಮಾತ್ರ ಅಭಿವೃದ್ಧಿ ಕಾರ್ಯಗಳು ಕೇಂದ್ರೀಕೃತವಾಗುತ್ತಿವೆ. ಬಡವರು, ಹಿಂದುಳಿದ ವರ್ಗಗಳು ಇನ್ನೂ ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಜನಪ್ರತಿನಿಧಿಗಳು ಕಾರ್ಯಕ್ಕಿಂತ ಹೆಚ್ಚು ಪ್ರಚಾರದಲ್ಲಿ ತೊಡಗಿರುವುದು ಕಂಡು ಬರುತ್ತದೆ. ಸಾಮಾಜಿಕ ಜಾಲತಾಣಗಳಲ್ಲಿ ಚಟುವಟಿಕೆ ಹೆಚ್ಚಾಗಿ, ನೇರ ಸಂಪರ್ಕ ಕಡಿಮೆಯಾಗುತ್ತಿದೆ.

ಇಂದು ಜನಸಂಪರ್ಕ ಕುಂದಿರುವ ಸಂದರ್ಭದಲ್ಲಿ ಗಾಂಧೀಜಿಯ ತತ್ವಗಳು ಸ್ಪಷ್ಟ ಮಾರ್ಗ ತೋರಿಸುತ್ತವೆ. ಪ್ರತಿಯೊಬ್ಬ ಜನಪ್ರತಿನಿಧಿ ತನ್ನನ್ನು ಜನಸೇವಕನೆಂದು ಭಾವಿಸಬೇಕು. ಗ್ರಾಮ ಸ್ವರಾಜ್ಯ, ಗ್ರಾಮೀಣ ಸಮಸ್ಯೆಗಳ ಪರಿಹಾರಕ್ಕೆ ಸ್ಥಳೀಯ ಸಂಸ್ಥೆಗಳ ಬಲವರ್ಧನೆ ಅಗತ್ಯ. ಸುಳ್ಳು ಭರವಸೆಗಳ ಬದಲು ನೈಜ ಸಾಧ್ಯತೆಗಳ ಬಗ್ಗೆ ಜನರಿಗೆ ಹೇಳಬೇಕು. ಸರಳ ಜೀವನ, ಜನಪ್ರತಿನಿಧಿಗಳು ಸರಳತೆಯ ಜೀವನ ನಡೆಸಿದರೆ, ಜನರ ವಿಶ್ವಾಸ ಹೆಚ್ಚುತ್ತದೆ.

ಜನಪ್ರತಿನಿಧಿಗಳು ಜನರೊಂದಿಗೆ ನಂಟು ಹೆಚ್ಚಿಸಬೇಕಾದ ಪ್ರಮುಖ ಕಾರಣವೇ ಅಭಿವೃದ್ಧಿ. ಗ್ರಾಮೀಣಾಭಿವೃದ್ಧಿ, ಗ್ರಾಮಗಳಲ್ಲಿ ರಸ್ತೆಗಳು, ವಿದ್ಯುತ್, ಕುಡಿಯುವ ನೀರು, ಆರೋಗ್ಯ ಕೇಂದ್ರ, ಶಾಲೆ ಮುಂತಾದ ಮೂಲಭೂತ ಸೌಲಭ್ಯಗಳ ಕೊರತೆ ಜನರ ಗೋಳಾಟಕ್ಕೆ ಕಾರಣವಾಗಿದೆ. ಗಾಂಧೀಜಿಯವರ ಗ್ರಾಮಸ್ವರಾಜ ತತ್ವವನ್ನು ಆಧರಿಸಿ ಜನಪ್ರತಿನಿಧಿಗಳು ಗ್ರಾಮಸಭೆಗಳಲ್ಲಿ ಪಾಲ್ಗೊಂಡು ಜನರ ಅಭಿಪ್ರಾಯ ಕೇಳಬೇಕು. ನಗರಾಭಿವೃದ್ಧಿ, ನಗರಗಳಲ್ಲಿ ಟ್ರಾಫಿಕ್, ಮಾಲಿನ್ಯ, ನೀರಿನ ಕೊರತೆ, ಕಸದ ನಿರ್ವಹಣೆ ಮುಖ್ಯ ಸಮಸ್ಯೆಗಳಾಗಿವೆ. ನಗರಾಭಿವೃದ್ಧಿ ಯೋಜನೆಗಳಲ್ಲಿ ನಾಗರಿಕರ ಅಭಿಪ್ರಾಯವನ್ನು ಒಳಗೊಳ್ಳುವುದೇ ಜನಸಂಪರ್ಕವನ್ನು ಹೆಚ್ಚಿಸುವ ಉತ್ತಮ ಮಾರ್ಗ. ಸಮಾನತೆಯ ಆರ್ಥಿಕತೆ, ಗಾಂಧೀಜಿ ಬಯಸಿದ ಆರ್ಥಿಕತೆ ಎಲ್ಲರಿಗೂ ಸಮಾನ ಲಾಭ ತಲುಪಿಸುವಂತಿರಬೇಕು.

ಇಂದಿನ ರಾಜಕೀಯದಲ್ಲಿ ಜನಪ್ರತಿನಿಧಿಗಳು ತಮ್ಮ ಪಾತ್ರವನ್ನು ಪುನರ್ವಿಮರ್ಶೆ ಮಾಡಬೇಕಾಗಿದೆ. ಗಾಂಧೀಜಿ ನೀಡಿದ ದಾರಿದೀಪ, ಜನಸಂಪರ್ಕವನ್ನು ದೈನಂದಿನ ಕಾರ್ಯವನ್ನಾಗಿ ಮಾಡುವುದು, ಕ್ಷೇತ್ರದಲ್ಲಿ ನಿರಂತರವಾಗಿ ಹಾಜರಾಗುವುದು, ಸಾರ್ವಜನಿಕ ಸಭೆಗಳು, ಮನೆ–ಮನೆ ಭೇಟಿಗಳು, ಸಮಸ್ಯೆ ಆಲಿಸುವ ವ್ಯವಸ್ಥೆ, ಸೇವಕತ್ವದ ಮನೋಭಾವ, ನೈತಿಕತೆ ಮತ್ತು ಪಾರದರ್ಶಕತೆ, ಹಣಕಾಸಿನ ವ್ಯವಹಾರಗಳಲ್ಲಿ ಪಾರದರ್ಶಕತೆ ತೋರಿಸುವುದು ಇತ್ಯಾದಿಗಳಿಂದ ಹೊಸ ರಾಜಕೀಯ ಸಂಸ್ಕೃತಿಯನ್ನು ಬೆಳೆಸಬೇಕು.

ಇಂದಿನ ಪ್ರಜಾಸತ್ತಾತ್ಮಕ ವ್ಯವಸ್ಥೆ ಉಳಿಯಬೇಕಾದರೆ, ಜನಪ್ರತಿನಿಧಿಗಳು ಜನರೊಂದಿಗೆ ನೇರ ಸಂಪರ್ಕವನ್ನು ಪುನರುಜ್ಜೀವಗೊಳಿಸಬೇಕು. ಗಾಂಧೀಜಿಯವರ ನುಡಿಗಳು ದಾರಿದೀಪ. ನೀನು ಮಾಡುವ ಪ್ರತಿಯೊಂದು ನಿರ್ಧಾರದಲ್ಲೂ, ಕೊನೆಯ ಸಾಲಿನ ಬಡವನ ಮುಖ ನೆನಪಿಸು. ಆ ನಿರ್ಧಾರ ಅವನಿಗೆ ಏನು ಕೊಡುವುದು ಎಂದು ಪರಿಶೀಲಿಸು. ಇಂದಿನ ರಾಜಕೀಯ ಈ ತತ್ವವನ್ನು ಅಳವಡಿಸಿಕೊಂಡರೆ, ಜನಪ್ರತಿನಿಧಿಜನರ ನಡುವೆ ಅಂತರ ಕಡಿಮೆಯಾಗಿ, ಪ್ರಜಾಪ್ರಭುತ್ವ ಬಲಿಷ್ಠವಾಗುವುದು, ಅಭಿವೃದ್ಧಿಯ ಲಾಭ ಸಮಾನವಾಗಿ ಹಂಚಿಕೆ ಆಗುವುದು.

ಇಂದಿನ ಭಾರತದಲ್ಲಿ ಪ್ರಜಾಪ್ರಭುತ್ವ ಜೀವಂತವಾಗಿದ್ದರೂ, ಅದರ ಗುಣಮಟ್ಟ ಪ್ರಶ್ನಾರ್ಹವಾಗಿದೆ. ಜನಪ್ರತಿನಿಧಿಗಳು ಜನರೊಂದಿಗೆ ನಂಟು ಕಡಿಮೆ ಮಾಡಿಕೊಂಡಿರುವುದರಿಂದ ಜನರಲ್ಲಿ ನಿರಾಸೆ ಹೆಚ್ಚುತ್ತಿದೆ. ಮಹಾತ್ಮ ಗಾಂಧೀಜಿಯವರ ಸತ್ಯ, ಅಹಿಂಸೆ, ಗ್ರಾಮಸ್ವರಾಜ, ಸೇವಾ ಮನೋಭಾವ, ಸರ್ವಧರ್ಮ ಸಮಭಾವ ತತ್ವಗಳನ್ನು ಆಧಾರವಾಗಿಸಿಕೊಂಡು ಜನಪ್ರತಿನಿಧಿಗಳು ತಮ್ಮ ಕಾರ್ಯವೈಖರಿಯನ್ನು ಬದಲಿಸಿಕೊಳ್ಳಬೇಕು. ಜನಪ್ರತಿನಿಧಿಗಳು ಜನರೊಂದಿಗೆ ನಂಟು ಹೆಚ್ಚಿಸಿದಾಗ, ಜನಸಮಸ್ಯೆಗಳು ನೇರವಾಗಿ ಪರಿಹಾರವಾಗುತ್ತವೆ. ಅಭಿವೃದ್ಧಿ ಸಮಾನವಾಗಿ ತಲುಪುತ್ತದೆ. ಯುವಕರಿಗೆ ನಂಬಿಕೆ ಬರುತ್ತದೆ. ಜನ–ರಾಜಕೀಯ ನಡುವಿನ ಅಂತರ ಕರಗುತ್ತದೆ. ಜನಪ್ರತಿನಿಧಿಗಳು ಜನರೊಂದಿಗೆ ದೂರ ಉಳಿದಾಗ, ಭ್ರಷ್ಟಾಚಾರ ಹೆಚ್ಚುತ್ತದೆ. ಜನರ ನಿರಾಸೆ ತೀವ್ರಗೊಳ್ಳುತ್ತದೆ. ಪ್ರಜಾಪ್ರಭುತ್ವದ ಅರ್ಥ ಕುಗ್ಗುತ್ತದೆ.



– ಸಿಕಂದರ ಎಂ.ಆರಿ.
ಪತ್ರಕರ್ತರು.

## ಗಾಝಾ ನಗರದಲ್ಲಿ ಶಾಲೆ, ನಿರಾಶ್ರಿತರ ಶಿಬಿರ, ಕುಡಿಯುವ ನೀರಿನ ಸೌಲಭ್ಯದ ಮೇಲೆ ಇಸ್ರೇಲ್ ಬಾಂಬ್ ದಾಳಿ: ಕನಿಷ್ಠ 16 ಪ್ಯಾಲೆಸ್ತೀನಿಯರು ಸಾವು

■ ವಿಜಯಸಾಕ್ಷಿ ಸುದ್ದಿ, ಗಾಝಾ

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ 20 ಅಂಶಗಳ ಕದನ ವಿರಾಮ ಯೋಜನೆ ಮುಂದಿಟ್ಟಿರುವ ನಡುವೆಯೇ ಗಾಝಾದಲ್ಲಿ ಇಸ್ರೇಲ್ ತನ್ನ ಆಕ್ರಮಣವನ್ನು ಮುಂದುವರಿಸಿದೆ. ಬುಧವಾರ (ಅ.1) 16 ಮಂದಿ ಪ್ಯಾಲೆಸ್ತೀನಿಯರನ್ನು ಇಸ್ರೇಲ್ ಹತ್ಯೆಗೈದಿದೆ ಎಂದು ವರದಿಯಾಗಿದೆ.

ಗಾಝಾ ನಗರದಲ್ಲಿ ಸ್ಥಳಾಂತರಗೊಂಡ ನಿರಾಶ್ರಿತರು ಆಶ್ರಯ ಪಡೆಯುತ್ತಿದ್ದ ಶಾಲೆಗಳನ್ನು ಗುರಿಯಾಗಿಸಿ ಇಸ್ರೇಲ್ ದಾಳಿ ನಡೆಸಿದೆ. ನಗರದ ಪೂರ್ವ ಝ್ಯೂಟೌನ್ ಪ್ರದೇಶದಲ್ಲಿರುವ ಅಲ್–ಫಲಾಹ್ ಶಾಲೆಗೆ ನಿಮಿಷಗಳ ಅಂತರದಲ್ಲಿ ಎರಡು ಬಾರಿ ದಾಳಿ ಮಾಡಲಾಗಿದೆ ಎಂದು ಅಲ್–ಅಹ್ಲಿ ಆಸ್ಪತ್ರೆಯ ಅಧಿಕಾರಿಗಳು ತಿಳಿಸಿದ್ದಾರೆ.



ಬುಧವಾರ ಬೆಳಿಗ್ಗೆ ಗಾಝಾ ನಗರದ ಪಶ್ಚಿಮ ಭಾಗದಲ್ಲಿ ಕುಡಿಯುವ ನೀರಿನ ಟ್ಯಾಂಕ್ ಸುತ್ತಲೂ ನೆರೆದಿದ್ದ ಜನರ ಮೇಲೆ ಇಸ್ರೇಲ್ ನಡೆಸಿದ ದಾಳಿಯಲ್ಲಿ ಐವರು ಪ್ಯಾಲೆಸ್ತೀನಿಯರು ಸಾವನ್ನಪ್ಪಿದ್ದಾರೆ ಎಂದು ಅಲ್–ಅಹ್ಲಿ ಆಸ್ಪತ್ರೆ ಮಾಹಿತಿ ನೀಡಿದೆ.

ಇನ್ನು ಗಾಝಾ ನಗರದ ಪಶ್ಚಿಮದಲ್ಲಿರುವ ಅಪಾರ್ಟ್‌ಮೆಂಟ್ ಮೇಲೆ ನಡೆದ ದಾಳಿಯಲ್ಲಿ ಮೃತಪಟ್ಟ ವ್ಯಕ್ತಿಯ ಶವವನ್ನು ಸ್ವೀಕರಿಸಲಾಗಿದೆ ಎಂದು ಅಲ್ ಶಿಫಾ ಆಸ್ಪತ್ರೆ ಹೇಳಿದೆ.

ಮಧ್ಯ ಗಾಝಾದಲ್ಲಿರುವ ನುಸೇರತ್ ನಿರಾಶ್ರಿತರ ಶಿಬಿರದ ಮೇಲೂ ಇಸ್ರೇಲ್ ದಾಳಿ ನಡೆಸಿದ್ದು, ದಂಪತಿ ಸಾವನ್ನಪ್ಪಿದ್ದಾರೆ ಎಂದು ಅಲ್–ಅವ್ದಾ ಆಸ್ಪತ್ರೆ ತಿಳಿಸಿದೆ. ಬುರೈಜ್ ನಿರಾಶ್ರಿತರ ಶಿಬಿರದ ಮೇಲೆ ನಡೆಸಿದ ಪ್ರತ್ಯೇಕ ದಾಳಿಯಲ್ಲಿ ಮತ್ತೊಬ್ಬ ವ್ಯಕ್ತಿ ಸಾವನ್ನಪ್ಪಿದ್ದಾರೆ ಎಂದು ಆಸ್ಪತ್ರೆ ಮಾಹಿತಿ ನೀಡಿದೆ.

ಮಂಗಳವಾರ (ಸೆ.30) ಗಾಝಾದಲ್ಲಿ ನಡೆದ ದಾಳಿಯಲ್ಲಿ ಸಾವನ್ನಪ್ಪಿದ ಟರ್ಕಿಶ್ ಪ್ರಸಾರ ಸಂಸ್ಥೆ ಟಿಆರ್‌ಟಿಯಲ್ಲಿ ಕೆಲಸ ಮಾಡುತ್ತಿದ್ದ ಪತ್ರಕರ್ತ ಯಾಹ್ಯಾ ಬರ್ಝಾಕ್ ಅವರ ಅಂತ್ಯಕ್ರಿಯೆಯನ್ನು ಯೋಜಿಸಲಾಗಿದೆ ಎಂದು ಟಿಆ–ರ್‌ಟಿ ತಿಳಿಸಿದೆ.

ಹತ್ಯೆಗೀಡಾದ ಪತ್ರಕರ್ತ ಅಥವಾ ಬುಧವಾರದ ದಾಳಿಗಳ ಕುರಿತು ಇಸ್ರೇಲಿ ಸೇನೆಯು ತಕ್ಷಣಕ್ಕೆ ಪ್ರತಿಕ್ರಿಯಿಸಿಲ್ಲ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮುಂದಿಟ್ಟಿರುವ 20 ಅಂಶಗಳ ಕದನ ವಿರಾಮ ಯೋಜನೆಗೆ ಇಸ್ರೇಲ್ ಒಪ್ಪಿಗೆ ಸೂಚಿಸಿದೆ. ಆದರೆ, ಹಮಾಸ್ ಇನ್ನೂ ಪ್ರತಿಕ್ರಿಯಿಸಿಲ್ಲ. ಹಮಾಸ್‌ಗೆ ಪ್ರತಿಕ್ರಿಯಿಸಲು ನಾಲ್ಕು ದಿನಗಳ ಸಮಯವಕಾಶ ಇದೆ ಎಂದು ಟ್ರಂಪ್ ಹೇಳಿದ್ದಾರೆ. ಈ ನಡುವೆ ಗಾಝಾದಲ್ಲಿ ಇಸ್ರೇಲ್ ನರಮೇಧ ಮುಂದುವರಿಸಿದೆ.

## ವಿಜೇತ ಕ್ರೀಡಾಪಟುಗಳಿಗೆ ಅಭಿನಂದನೆ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ದಸರಾ ಮಹೋತ್ಸವ–2025ರ ಅಂಗವಾಗಿ ಮೈಸೂರಿನಲ್ಲಿ ಜರುಗಿದ ರಾಜ್ಯಮಟ್ಟದ ಸಿ.ಎಂ ಕಪ್ ದಸರಾ ಕ್ರೀಡಾಕೂಟದಲ್ಲಿ ಅಟ್ಲೆಟಿಕ್ಸ್, ಹಾಕಿ, ವ್ಹಾಲಿಬಾಲ್, ಜಿಮ್ನಾಸ್ಟಿಕ್, ಟೇಕ್ವಾಂಡೋ ಮತ್ತು ಕುಸ್ತಿ ವಿಭಾಗದಲ್ಲಿ ಒಟ್ಟು 111 ಪದಕಗಳು ಧಾರವಾಡ ಜಿಲ್ಲೆಗೆ ಲಭಿಸಿದ್ದು, ಅದರಲ್ಲಿ ಮೂರು ವಿಭಾಗ ಗುಂಪು ಸ್ಪರ್ಧೆಯಲ್ಲಿ ಟ್ರೋಫಿ ಲಭಿಸಿವೆ.

ಈ ಎಲ್ಲಾ ವಿಜೇತ ಕ್ರೀಡಾಪಟುಗಳಿಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಅಭಿನಂದಿಸಿ, ಕ್ರೀಡಾಪಟುಗಳಿಗೆ ಶುಭ ಕೋರಿದರು. ಈ ಸಂದರ್ಭದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಸದಾನಂದ ಹೆಚ್.ಅಮಾರಪುರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಚೇರಿ ಅಧೀಕ್ಷಕ ಸುರೇಂದ್ರ ಗಂ.ಭಾವಿಕಟ್ಟಿ, ಭಾರತೀಯ ಕ್ರೀಡಾ ಪ್ರಾಧಿಕಾರದ ಸಹಾಯಕ ನಿರ್ದೇಶಕ ಶ್ರೀರಾಮ ಬುಡಕಿ, ಜಿಮ್ನಾಸ್ಟಿಕ್ ತರಬೇತುದಾರರ ಬಸವರಾಜ ಪಟಾತ್, ಇಲಾಖೆಯ ಎಲ್ಲಾ ತರಬೇತುದಾರರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಕವಿಗೋಷ್ಠಿಯಲ್ಲಿ ಗಮನ ಸೆಳೆದ ಮರುಳಸಿದ್ದಪ್ಪ



■ ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ಹುಲಕೋಟಿ ಗ್ರಾಮದ ಪ್ರಸಿದ್ಧ ಶಾಯಿರಿ ಕವಿ ಮರುಳಸಿದ್ದಪ್ಪ ದೊಡ್ಡಮನಿ ವಿಶ್ವ ವಿಖ್ಯಾತ ಮೈಸೂರು ದಸರಾದ ಪ್ರಬುದ್ಧ ಕವಿಗೋಷ್ಠಿಯಲ್ಲಿ ಭಾಗವಹಿಸಿ ಕವಿಗೋಷ್ಠಿಯಲ್ಲಿ ಗದಗ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಪಂಚ ಕಾವ್ಯದೌತಣ ಕವಿಗೋಷ್ಠಿಯಲ್ಲಿ ತಮ್ಮ ಕವನ ವಾಚಿಸುವ ಮೂಲಕ ಎಲ್ಲರ ಗಮನ ಸೆಳೆದರು.

ಕಾರ್ಯಕ್ರಮವನ್ನು ಕವಿ ಡಾ. ಸಿ.ಪಿ. ಕೃಷ್ಣಕುಮಾರ ಉದ್ಘಾಟಿಸಿ ಮಾತನಾಡಿ, ಕವಿ ನಿಜವಾಗಿಯೂ ಅಜರಾಮರ. ಅವನಿಗೆ ಸಾವು ಬರಬಹುದು. ಆದರೆ, ಅವನ ಕಾವ್ಯಕ್ಕೆ ಸಾವೆಂಬುದಿಲ್ಲ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಡಾ. ಮಲ್ಲಿಕಾ ಘಂಟಿ ಮಾತನಾಡಿ, ಕವಿ ಮರುಳಸಿದ್ದಪ್ಪ ದೊಡ್ಡಮನಿ ಇವರು ಜೀವ ಪರವಾದ ಕಾಳಜಿ ಇರುವ, ಮನುಷ್ಯ ಪ್ರೀತಿ, ನೋವಿಗೆ ಸ್ಪಂದಿಸುವ ಕಾವ್ಯ ಅತ್ಯಂತ ಅರ್ಥಪೂರ್ಣವಾಗಿದೆ ಎಂದು ಹೇಳಿದರು. ವೇದಿಕೆಯ ಮೇಲೆ ಅಪರ ಜಿಲ್ಲಾಧಿಕಾರಿ ಡಾ. ಕೆ. ಶಿವರಾಜ್, ಪ್ರೊ. ಎನ್.ಕೆ. ಲೋಲಾಕ್ಷಿ ಮುಂತಾದವರು ಉಪಸ್ಥಿತರಿದ್ದರು.

## ಟ್ರಂಪ್ ಬಜೆಟ್‌ಗೆ ಸಿಗದ ಅನುಮೋದನೆ: ಅಮೆರಿಕ ಸರ್ಕಾರದ ಕೆಲಸಗಳು ಸ್ಥಗಿತ

■ ವಿಜಯಸಾಕ್ಷಿ ಸುದ್ದಿ, ಅಮೆರಿಕ

ಬಜೆಟ್‌ಗೆ ಅನುಮೋದನೆ ಸಿಗದ ಕಾರಣ ಆರು ವರ್ಷಗಳಲ್ಲಿ, ಇದೇ ಮೊದಲ ಬಾರಿಗೆ ಅಮೆರಿಕ ಸರ್ಕಾರದ ಕಾರ್ಯ ಚಟುವಟಿಕೆಗಳು ಸ್ಥಗಿತವಾಗಿರುವ ಬಗ್ಗೆ ವರದಿಯಾಗಿದೆ.

ಸರ್ಕಾರಿ ಕಚೇರಿಗಳು ಮತ್ತು ಸೇವೆಗಳನ್ನು ಮುಂದುವರೆಸಲು ಬೇಕಾದ ಹಣಕಾಸಿನ ಒಪ್ಪಂದವನ್ನು ರೂಪಿಸಲು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಕಾಂಗ್ರೆಸ್ (ಅಮೆರಿಕದ ಶಾಸಕಾಂಗ) ಸಮಯಕ್ಕೆ ಸರಿಯಾಗಿ ಒಮ್ಮತಕ್ಕೆ ಬಂದಿಲ್ಲ. ಈ ಒಪ್ಪಂದಕ್ಕೆ ಬುಧವಾರ ರಾತ್ರಿಯ ಗಡುವಿತ್ತು, ಆದರೆ ಒಪ್ಪಿಗೆ ಆಗದ ಕಾರಣ ಸರ್ಕಾರದ ಕೆಲವು ಕಾರ್ಯನಿರ್ವಹಣೆ ತಾತ್ಕಾಲಿಕವಾಗಿ ನಿಂತುಹೋಗಿದೆ. ಇದನ್ನು "ಗವರ್ನಮೆಂಟ್ ಶಟ್‌ಡೌನ್" ಎಂದು ಕರೆಯಲಾಗುತ್ತದೆ.

ಹಣಕಾಸಿನ ಸಮಸ್ಯೆಯಿಂದ ಸುಮಾರು 750,000 ಕೇಂದ್ರ ಸರ್ಕಾರಿ ಉದ್ಯೋಗಿಗಳು (ಫೆಡರಲ್ ವರ್ಕರ್ಸ್) ತಾತ್ಕಾಲಿಕವಾಗಿ ಕೆಲಸಕ್ಕೆ ಬರದಂತೆ ಆದೇಶಿಸಲಾಗಿದೆ. ಇದನ್ನು "ಫರ್ಲೊ" (furlough) ಎನ್ನಲಾಗುತ್ತದೆ. ಅಂದರೆ, ಈಗ ಕೆಲಸವೂ ಇಲ್ಲ, ಈ ಹಿಂದೆ ಮಾಡಿದ ಕೆಲಸಕ್ಕೆ ಸಂಬಳವೂ ತಕ್ಷಣಕ್ಕೆ ಇಲ್ಲ. ಆ ಸಂಬಳ ಶಟ್‌ಡೌನ್ ಮುಗಿದ ನಂತರ ಪಾವತಿ ಆಗಬಹುದು ಎಂದು ವರದಿಗಳು ಹೇಳಿವೆ.

ಕೆಲವು ಉದ್ಯೋಗಿಗಳು (ಉದಾಹರಣೆಗೆ, ಲೇಬರ್ ಡಿಪಾರ್ಟ್‌ಮೆಂಟ್‌ನ ಸುಮಾರು 3,000ಕ್ಕೂ ಹೆಚ್ಚು ಸಿಬ್ಬಂದಿ) ಶಾಶ್ವತವಾಗಿ ಕೆಲಸ ಕಳೆದುಕೊಳ್ಳುವ ಆತಂಕದಲ್ಲಿದ್ದಾರೆ. ಟ್ರಂಪ್ ಸರ್ಕಾರ ಶಟ್‌ಡೌನ್ ಅವಕಾಶವನ್ನು ಬಳಸಿಕೊಂಡು, 'ಅನಗತ್ಯ' ಎಂದು ಪರಿಗಣಿಸುವ ಉದ್ಯೋಗಗಳನ್ನು ಕೆಲಸದಿಂದ ತೆಗೆದು ಹಾಕಲು ಯೋಜಿಸಿದೆ ಎಂದು ವರದಿಗಳು ವಿವರಿಸಿವೆ.

ಸರ್ಕಾರದ ಕಾರ್ಯಾಚರಣೆ ಸ್ಥಗಿತಗೊಳ್ಳುವುದನ್ನು ನಾವು ಬಯಸುವುದಿಲ್ಲ ಎಂದು ಮಧ್ಯರಾತ್ರಿಯ ಗಡುವಿನ ಮೊದಲು ಮಂಗಳವಾರ ಶ್ವೇತಭವನದಲ್ಲಿ ಟ್ರಂಪ್ ಹೇಳಿದ್ದಾರೆ.



ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕಾಂಗ್ರೆಸ್ ನಾಯಕರನ್ನು ಖಾಸಗಿಯಾಗಿ ಭೇಟಿಯಾಗಿದ್ದರು. ಆದರೆ, ಡೆಮಾಕ್ರಟ್‌ಗಳು ಮತ್ತು ರಿಪಬ್ಲಿಕನ್‌ಗಳ ನಡುವೆ ಒಪ್ಪಂದ ಮಾಡಿಕೊಳ್ಳಲು ಅವರಿಗೆ ಸಾಧ್ಯವಾಗಿಲ್ಲ. ಇದರಿಂದ ಸರ್ಕಾರಿ ಕಾರ್ಯನಿರ್ವಹಣೆಯ ಸ್ಥಗಿತ ಆಗಿದೆ.

ಡೊನಾಲ್ಡ್ ಟ್ರಂಪ್ ಆಡಳಿತದಲ್ಲಿ ಇದು ಮೂರನೇ ಬಾರಿಯಾಗಿದೆ ಹಣದ ಕೊರತೆಯಿಂದ (ಫೆಡರಲ್ ಫಂಡಿಂಗ್ ಲ್ಯಾಪ್ಸ್) ಸರ್ಕಾರಿ ಕಾರ್ಯನಿರ್ವಹಣೆ ತಾತ್ಕಾಲಿಕವಾಗಿ ಸ್ಥಗಿತಗೊಂಡಿರುವುದು. ಈ ವರ್ಷ (2025) ಟ್ರಂಪ್ ಮತ್ತೆ ಅಧ್ಯಕ್ಷರಾದ ಬಳಿಕ ಇದು ಮೊದಲ ಶಟ್‌ಡೌನ್ ಆಗಿದೆ.

ಸಾಮಾನ್ಯವಾಗಿ, ಡೆಮಾಕ್ರಟ್‌ಗಳು ಸರ್ಕಾರದ ಕೆಲಸಗಳು ಸುಗಮವಾಗಿ ನಡೆಯಲಿ ಎಂದು ಬಯಸುತ್ತಾರೆ ಮತ್ತು ಶಟ್‌ಡೌನ್‌ನಂತಹ ಸಮಸ್ಯೆಗಳನ್ನು ತಪ್ಪಿಸಲು ಪ್ರಯತ್ನಿಸುತ್ತಾರೆ. ಆದರೆ ಈ ಬಾರಿ, ಅವರೇ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ನೊಂದಿಗೆ ಜಗಳ ಆರಂಭಿಸಿದ್ದಾರೆ, ಇದು ಅಸಾಮಾನ್ಯವಾಗಿದೆ.

ಟ್ರಂಪ್ ಎರಡನೇ ಬಾರಿಗೆ ಅಧ್ಯಕ್ಷರಾಗಿದ್ದಾರೆ ಮತ್ತು ಅವರ ಎರಡನೇ ಅವಧಿಯ ಯೋಜನೆಗಳು (ಉದಾಹರಣೆಗೆ, ಅಕ್ರಮ ವಲಸಿಗರ ಗಡಿಪಾರು, ಸರ್ಕಾರಿ ಖರ್ಚು ಕಡಿತ) ಡೆಮಾಕ್ರಟ್‌ಗಳಿಗೆ ಒಪ್ಪಿಗೆಯಿಲ್ಲ.

ಡೆಮಾಕ್ರಟ್‌ಗಳ ಮತದಾರರು ಈ ಯೋಜನೆಗಳನ್ನು ವಿರೋಧಿಸಲು ಒತ್ತಾಯಿಸುತ್ತಿದ್ದಾರೆ. ಆದ್ದರಿಂದ, ಡೆಮಾಕ್ರಟ್‌ಗಳು ಟ್ರಂಪ್ ಅವರೊಂದಿಗೆ ಒಪ್ಪಂದ ಮಾಡಿಕೊಳ್ಳದೆ, ತಮ್ಮ ಬೇಡಿಕೆಗಳಿಗೆ ಒತ್ತು ಕೊಡುತ್ತಿದ್ದಾರೆ.

ಡೆಮಾಕ್ರಟ್‌ಗಳು ಅಫೋರ್ಡಬಲ್ ಕೇರ್ ಆಕ್ಟ್ (ಒಬಾಮಾಕೇರ್ ಎಂದೂ ಕರೆಯುತ್ತಾರೆ) ಎಂಬ ಆರೋಗ್ಯ ವಿಮಾ ಯೋಜನೆಗೆ ಹಣಕಾಸು ಒದಗಿಸಬೇಕೆಂದು ಒತ್ತಾಯಿಸುತ್ತಿದ್ದಾರೆ. ಈ ಯೋಜನೆಯಡಿ, ಕೋಟ್ಯಂತರ ಜನರಿಗೆ ಆರೋಗ್ಯ ವಿಮೆಯನ್ನು ಕಡಿಮೆ ವೆಚ್ಚದಲ್ಲಿ ಪಡೆಯಲು ಸಬ್ಸಿಡಿಗಳು (ಸರ್ಕಾರದಿಂದ ಆರ್ಥಿಕ ಸಹಾಯ) ಇವೆ. ಈಗ ಈ ಸಬ್ಸಿಡಿಗಳಿಗೆ ಹಣಕಾಸು ಮುಗಿಯುತ್ತಿದೆ.

ಒಂದು ವೇಳೆ ಈ ಸಬ್ಸಿಡಿಗಳಿಗೆ ಹೊಸ ಹಣಕಾಸು ಸಿಗದಿದ್ದರೆ, ದೇಶದಾದ್ಯಂತ ಆರೋಗ್ಯ ವಿಮೆಯ ಪ್ರೀಮಿಯಂ ಶುಲ್ಕಗಳು (ವಿಮೆಯ ತಿಂಗಳ ಶುಲ್ಕ) ತುಂಬಾ ಏರಿಕೆಯಾಗುತ್ತವೆ. ಇದರಿಂದ ಸಾಮಾನ್ಯ ಜನರಿಗೆ ವಿಮೆ ದುಬಾರಿಯಾಗುತ್ತದೆ.

ರಿಪಬ್ಲಿಕನ್‌ಗಳು (ಡೊನಾಲ್ಡ್ ಟ್ರಂಪ್‌ರ ಪಕ್ಷ) ಈಗ ಡೆಮಾಕ್ರಟ್‌ಗಳೊಂದಿಗೆ ಯಾವುದೇ ಮಾತುಕತೆಗೆ ಒಪ್ಪಿಲ್ಲ. ಶಟ್‌ಡೌನ್ ಸಮಸ್ಯೆಯನ್ನು ಬಗೆಹರಿಸಲು ಒಪ್ಪಂದ ಮಾಡಿಕೊಳ್ಳುವ ಬದಲು, ಅವರು ಟ್ರಂಪ್‌ಗೆ 'ಯಾವ ಮಾತುಕತೆಯೂ ಬೇಡ' ಎಂದು ಸಲಹೆ ಕೊಟ್ಟಿದ್ದಾರೆ.

**ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ 9ನೇ ದಿನದ ಕಾರ್ಯಕ್ರಮದಲ್ಲಿ ರಂಭಾಪುರಿ ಶ್ರೀಗಳು**

# ಸಾಮರಸ್ಯದ ಬದುಕು ಶಾಂತಿಗೆ ಮೂಲ

■ ವಿಜಯಸಾಕ್ಷಿ ಸುದ್ದಿ, ಬಸವಕಲ್ಯಾಣ

ಬದುಕು ಭಗವಂತ ಕೊಟ್ಟ ಅಮೂಲ್ಯ ಕೊಡುಗೆ. ಜೀವನದಲ್ಲಿ ಪರಸ್ಪರ ನಂಬಿಕೆ, ವಿಶ್ವಾಸಗಳು ಬಹಳ ಮುಖ್ಯ. ನಂಬಿಕೆ ಕಳೆದುಕೊಂಡರೆ ಬಾಳು ಬರಡು. ನಂಬಿಕೆ ಗಳಿಸಿಕೊಳ್ಳುವುದು ಸುಲಭದ ಮಾತಲ್ಲ. ಪರಸ್ಪರ ಸಾಮರಸ್ಯದಿಂದ ಬಾಳಿದರೆ ಎಲ್ಲೆಡೆ ಶಾಂತಿ, ನೆಮ್ಮದಿ ಕಾಣಲು ಸಾಧ್ಯವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ 9ನೇ ದಿನದ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಒಳ್ಳೆಯದು ಉಳಿಯಬೇಕಾದರೆ ಕೆಟ್ಟದ್ದರ ಜೊತೆ–ಗೆ ಹೋರಾಡಬೇಕಾದದ್ದು ಅನಿವಾರ್ಯ. ಒಳ್ಳೆಯದಕ್ಕಿಂತ ಕೆಟ್ಟದ್ದು ಬಹುಬೇಗ ಬೆಳೆದು ಅಷ್ಟೇ ಬೇಗ ನಾಶವಾಗುತ್ತದೆ. ಬೆಳಗುವ ಸೂರ್ಯನಿಗೆ ಮಣ್ಣು ಎರಚಿದರೆ ಅದು ಸೂರ್ಯನಿಗೆ ತಾಕುವುದಿಲ್ಲ. ಎರಚಿದವರ ಕಣ್ಣಲ್ಲಿ ಬೀಳುವುದೇ ಹೊರತು ಸಜ್ಜನರಿಗೆ ತಾಕುವುದಿಲ್ಲ. ಬಹು ಜನ್ಮಗಳ ಪುಣ್ಯದ ಫಲವಾಗಿರುವ ಈ ಮಾನವ ಜೀವನ ಸಾರ್ಥಕಪಡಿಸಿಕೊಳ್ಳುವುದು ಎಲ್ಲರ ಧ್ಯೇಯವಾಗಬೇಕು. ದಾರಿ ಚೆನ್ನಾಗಿದೆ ಎಂದು ತಪ್ಪು ದಾರಿ ತುಳಿದಾಗ ದಾರಿ ಸಾಗಬಹುದೇ ಹೊರತು ಮುಟ್ಟಬೇಕಾದ ಊರು ತಲುಪಲಾಗದು. ಗಾಳಿ ಬೀಸಿದತ್ತ ಹುಟ್ಟು ಹಾಕಿದರೆ ಹರಿಗೋಲು ಉಳಿಯಬಹುದೇ ಹೊರತು ಗುರಿ ಸೇರುವುದು ಕಷ್ಟ. ಸುಲಭವಾದದ್ದು ಶುಭಕರ ಆಗಲಾರದು. ಕಷ್ಟವೆನಿಸುವುದು ಸುಖದ ದಾರಿಗೆ ರಹದಾರಿಯಾಗಿದೆ.

ಮನುಷ್ಯನಿಗೆ ಆರೋಗ್ಯ ಬೇಕು. ಆದರೆ ಆರೋಗ್ಯ ಸೂತ್ರದ ಪರಿಪಾಲನೆ ಬೇಕಾಗಿಲ್ಲ. ವಿಶ್ವವಿದ್ಯಾಲಯದ ಪದವಿ ಬೇಕು. ಆದರೆ ಅಧ್ಯಯನ ಬೇಕಾಗಿಲ್ಲ. ಶಾಸನದ ರಕ್ಷೆ ಬೇಕು. ಆದರೆ ಶಾಸನದ ರಕ್ಷಣೆ ಬೇಕಾಗಿಲ್ಲ. ಧರ್ಮ ನೀಡುವ ಫಲ ಬೇಕು. ಆದರೆ ಧರ್ಮದ ಪರಿಪಾಲನೆ ಬೇಕಾಗಿಲ್ಲ. ಪೂಜಿಸುವ ಭಜಿಸುವ ದಾರಿ ಹಲವಾದರೂ ಸೇರುವ ಗುರಿ ಒಂದೇ ಎಂದು ಬೋಧಿಸಿದ ಶ್ರೀ ಜಗದ್ಗುರು ರೇಣುಕಾಚಾರ್ಯರ ಮತ್ತು ಶರಣರ ಚಿಂತನ ಅರಿತು ಬಾಳಿದಾಗ ಎಲ್ಲೆಡೆ ಶಾಂತಿ, ಸಮೃದ್ಧಿ ನೆಲೆಗೊಳ್ಳಲು ಸಾಧ್ಯವಾಗುತ್ತದೆ ಎಮದರು.



ಧಾರ್ಮಿಕ ಮತ್ತು ಪಾರಂಪರಿಕ ಕ್ಷೇತ್ರದಲ್ಲಿ ಶ್ರೇಷ್ಠ ಸಾಧನೆ ಮಾಡಿದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳಿಗೆ 'ಶಿವಾಚಾರ್ಯ ರತ್ನ' ಪ್ರಶಸ್ತಿ ಪ್ರದಾನ ಮಾಡಿ ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡ ಸುಭಾಷ ಕಲ್ಲೂರ ಮಾತನಾಡಿ, ಭಾರತೀಯ ಪುಣ್ಯ ಭೂಮಿಯಲ್ಲಿ ಹಲವಾರು ಧರ್ಮ ಪರಂಪರೆಗಳು ಬೆಳೆದು ಬಂದಿವೆ. ಆಚರಿಸುವ ಹಬ್ಬಗಳು ಜನಜೀವನದ ಮೇಲೆ ಅಪಾರವಾದ ಪ್ರಭಾವ ಬೀರಿವೆ. ಈ ನಾಡಿನ ಸಂಸ್ಕೃತಿಯ ಪಾವಿತ್ರ್ಯವನ್ನು ಕಾಪಾಡಿಕೊಂಡು ಬರುವುದು ಎಲ್ಲರ ಗುರಿಯಾಗಬೇಕು. ಹೃದಯ ಹಸನಗೊಂಡು ಮನಸ್ಸು ವಿಕಾಸಗೊಳ್ಳಬೇಕು. ಜನರ ಭಾವನೆಗಳು ವಿಕಾರಗೊಳ್ಳದೇ ವಿಕಾಸಗೊಳ್ಳಬೇಕು ಎಂದರು.

ಕಡಕೋಳ ಶ್ರೀ ಮಡಿವಾಳೇಶ್ವರಮಠದ ಡಾ. ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ನಿರಗೂಡಿ ಹವಾಮಲ್ಲಿನಾಥ ಸ್ವಾಮಿಗಳು ಸಮ್ಮುಖ ವಹಿಸಿದ್ದರು. ಎಮ್ಮಿಗನೂರು ಹಂಪಿ ಸಾವಿರದೇವರಮಠದ ವಾಮದೇವ ಮಹಂತ ಶಿವಾಚಾರ್ಯ ಸ್ವಾಮಿಗಳು ಜೀವ ಜಗತ್ತಿಗೆ ವೀರಶೈವ–ಲಿಂಗಾಯತ ಧರ್ಮದ ಕೊಡುಗೆ ಕುರಿತು ಅದ್ಭುತ ಉಪನ್ಯಾಸ ನೀಡಿದರು. ದೇವಾಪುರ–ಸ್ಟೇಷನ್ ಬಬಲಾದನ ಶಿವಮೂರ್ತಿ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಮುಖ್ಯ ಅತಿಥಿಗಳಾಗಿ ಬೀದರಿನ ಬಿ.ಜಿ. ಶೆಟ್ಟಗಾರ, ಕ್ಷೇತ್ರ ಶಿಕ್ಷಣಾಧಿಕಾರಿ ಸಿದ್ಧವೀರಯ್ಯಾ ರುದ್ರನೂರ ಹಾಗೂ ಕ್ಷೇತ್ರ ಸಮನ್ವಯ ಅಧಿಕಾರಿ ಪ್ರಭಾಕರ ಕಳಮಾಸೆ ಭಾಗವಹಿಸಿದ್ದರು. ಬಸವಕಲ್ಯಾಣದ ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಶಿವಕುಮಾರ ಜಡಗೆ ಸ್ವಾಗತಿಸಿದರು. ಗುರುಲಿಂಗಯ್ಯಾ ಹಿತ್ತಲಶಿರೂರ ಇವರಿಂದ ಸಂಗೀತ ಜರುಗಿತು. ಶಿವಮೊಗ್ಗದ ಶಾಂತಾ ಆನಂದ ಹಾಗೂ ರಮೇಶ ರಾಜೋಳೆ ಶಿವಪೂರ ನಿರೂಪಿಸಿದರು. ಬಸವಕಲ್ಯಾಣದ ಮಲ್ಲಯ್ಯಾ ಸ್ವಾಮಿ ಹಿರೇಮಠ, ಶರಣಪ್ಪ ಬಿರಾದಾರ ತ್ರಿಪೂರಾಂತ ಇವರಿಂದ ಅನ್ನ ದಾಸೋಹ ಜರುಗಿತು.

# ಸಾಧಕರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಇಲ್ಲಿಯ ಹೊಸಪೇಟ ಚೌಕ್ ಓಣಿಯಲ್ಲಿರುವ ಶ್ರೀಕಾಳಿಕಾದೇವಿ ದೇವಸ್ಥಾನದಲ್ಲಿ ಶರನ್ನವರಾತ್ರಿ ಉತ್ಸವದ ಅಂಗವಾಗಿ ಆಯೋಜಿಸಿದ್ದ ಜಾಗೃತಿ ಸಭೆ, ಪ್ರತಿಭಾ ಪುರಸ್ಕಾರ ಮತ್ತು ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ಹಾಗೂ ಹವ್ಯಾಸಿ ರಂಗಕರ್ಮಿ ಮೌನೇಶ ಚಿ.ಬಡಿಗೇರ(ನರೇಗಲ್ಲ), ನಿವೃತ್ತ ಬಿಸಿಯೂಟ ನೌಕರರಾದ ಶೋಭಾ ನರಗುಂದ, ರಾಜ್ಯ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಸತೀಶ ಹೊರಪೇಟಿ ಅವರನ್ನು ಸನ್ಮಾನಿಸಲಾಯಿತು.

ಕಿತ್ತೂರ ಕರ್ನಾಟಕ ಕನ್ನಡ ಪ್ರಾದೇಶಿಕ ದಿನಪತ್ರಿಕೆಯ ಸಂಪಾದರು ಹಾಗೂ ಕರ್ನಾಟಕ ಕಾರ್ಯನಿರತ ಸಂಪಾದಕರ ಸಂಘದ ರಾಜ್ಯ ಉಪಾಧ್ಯಕ್ಷ ಮಂಜುನಾಥ ಬಸಪ್ಪ ಅಬ್ಬಿಗೇರಿ, ಹಿರಿಯ ಸಾಹಿತಿ ಡಿ.ವಿ. ಬಡಿಗೇರ, ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ.ಕಡ್ಲಿಕೊಪ್ಪ, ವರವಿ ಶ್ರೀಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ಅಧ್ಯಕ್ಷ ಮೋಹನ ಎಸ್.ನರಗುಂದ, ಪ್ರವಚನಕಾರರಾದ ರಾಮಕೃಷ್ಣ ಕಲ್ಯಾಣಿ, ಬೆಟಗೇರಿ ಕಾಳಿಕಾದೇವಿ ದೇವಸ್ಥಾನ ಟ್ರಸ್ಟ್ ಕಮಿಟಿ ಅಧ್ಯಕ್ಷ ಶ್ರೀಧರ ಎಸ್.ಕೊಣ್ಣೂರ, ಬಾಲರಾಜ ಕೊಣ್ಣೂರ, ವೀರೇಶ ಅಂ.ಅಕ್ಕಸಾಲಿ, ಅಶೋಕ ಸುತಾರ ಪಾಲ್ಗೊಂಡಿದ್ದರು.


# ಬಿಹಾರ | ಎಸ್‌ಐಆರ್ ಬಳಿಕ ಅಂತಿಮ ಮತದಾರರ ಪಟ್ಟಿ ಪ್ರಕಟ: ಗಂಭೀರ ಪ್ರಶ್ನೆಯೆತ್ತಿದ ಯೋಗೇಂದ್ರ ಯಾದವ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಬಳಿಕ, ಮಂಗಳವಾರ (ಸೆ.30) ಭಾರತೀಯ ಚುನಾವಣಾ ಆಯೋಗ (ಇಸಿಐ) ಬಿಹಾರದ ಮತದಾರರ ಅಂತಿಮ ಪಟ್ಟಿಯನ್ನು ಬಿಡುಗಡೆ ಮಾಡಿದೆ.

ಈ ವರ್ಷದ ಜೂನ್ 24ರ ವೇಳೆಗೆ 7.89 ಕೋಟಿ ಇದ್ದ ಬಿಹಾರದ ಒಟ್ಟು ಮತದಾರ ಸಂಖ್ಯೆ, ಎಸ್‌ಐಆರ್ ಬಳಿಕ 7.42 ಕೋಟಿಗೆ ಇಳಿದಿದೆ. ಚುನಾವಣಾ ಆಯೋಗದ ಪತ್ರಿಕಾ ಪ್ರಕಟಣೆಯ ಪ್ರಕಾರ 65 ಲಕ್ಷ ಮತದಾರರನ್ನು ಪಟ್ಟಿಯಿಂದ ಕೈಬಿಡಲಾಗಿದೆ.

ಎಸ್‌ಐಆರ್ ಬಳಿಕ ಆಗಸ್ಟ್ 1, 2025ರಂದು ಚುನಾವಣಾ ಆಯೋಗ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಿತ್ತು. ಅದರಲ್ಲಿ 7.24 ಕೋಟಿ ಮತದಾರರಿದ್ದರು. ಇವರಲ್ಲಿ 3.66 ಲಕ್ಷ ಅನರ್ಹ ಮತದಾರರನ್ನು ಕೈಬಿಡಲಾಗಿದೆ. ಮತ್ತು 21.53 ಲಕ್ಷ ಅರ್ಹ ಮತದಾರರನ್ನು ಫಾರ್ಮ್ 6 ಬಳಸಿ ಸೇರಿಸಲಾಗಿದೆ. ಇದರಿಂದಾಗಿ ಅಂತಿಮ ಮತದಾರರ ಸಂಖ್ಯೆ 7.42 ಕೋಟಿ ಆಗಿದೆ.



ಎಸ್‌ಐಆರ್ ಪ್ರಕ್ರಿಯೆ ಸಂಕೀರ್ಣವಾಗಿತ್ತು. ಇದಕ್ಕಾಗಿ ಇದರಲ್ಲಿ ಭಾಗಿಯಾಗಿದ್ದ ಎಲ್ಲಾ ಪಕ್ಷಗಳು, ಮತದಾರರು ಮತ್ತು ಇತರ ಪ್ರಮುಖ ಪಾಲುದಾರರಿಗೆ ಧನ್ಯವಾದ ಅರ್ಪಿಸುತ್ತೇನೆ ಎಂದು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಹೇಳಿದ್ದಾರೆ. ಈ ನಡುವೆ ಅಂತಿಮ ಮತದಾರರ ಪಟ್ಟಿ ಪ್ರಕಟಗೊಂಡ ನಂತರ, ವಿರೋಧ ಪಕ್ಷಗಳಿಂದ ಚುನಾವಣಾ ಆಯೋಗದ ವಿರುದ್ಧ ಮೌಖಿಕ ದಾಳಿ ಮತ್ತು ಟೀಕೆಗಳು ಕೇಳಿ ಬಂದಿವೆ.

**4.6 ಲಕ್ಷ ಹೊಸ ಮತದಾರರು ಹೇಗೆ ಸೇರ್ಪಡೆಯಾದರು? ಯೋಗೇಂದ್ರ ಯಾದವ್ ಪ್ರಶ್ನೆ**

ಅಂತಿಮ ಪಟ್ಟಿಗೆ 4.6 ಲಕ್ಷ ಹೊಸ ಮತದಾರರನ್ನು ಹೇಗೆ ಸೇರಿಸಲಾಗಿದೆ ಎಂದು ಯೋಗೇಂದ್ರ ಯಾದವ್ ಚುನಾವಣಾ ಆಯೋಗವನ್ನು ಪ್ರಶ್ನಿಸಿದ್ದಾರೆ.

"ಚುನಾವಣಾ ಆಯೋಗದ ಪ್ರಕಾರ, ಸೆಪ್ಟೆಂಬರ್ 1ರವರೆಗೆ ಸ್ವೀಕರಿಸಿದ ಹೊಸ ಫಾರ್ಮ್ –6 ಸಂಖ್ಯೆ 16.93 ಲಕ್ಷ. ನಂತರ ಅರ್ಜಿ ಸಲ್ಲಿಸಲು ಅವಕಾಶ ಇರಲಿಲ್ಲ. ಹೀಗಿರುವಾಗ ಚುನಾವಣಾ ಆಯೋಗ ಒಟ್ಟು 21.53 ಲಕ್ಷ ಮತದಾರರನ್ನು ಸೇರ್ಪಡೆಗೊಳಿಸಿರುವುದು ಹೇಗೆ? ಸೆಪ್ಟೆಂಬರ್ 1ರ ನಂತರ ಅಂತಿಮ ಪಟ್ಟಿಗೆ ಕನಿಷ್ಠ 4.6 ಲಕ್ಷ ಹೊಸ ಮತದಾರರು ಸೇರ್ಪಡೆಯಾಗಿದ್ದು ಹೇಗೆ? ಎಂದು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಯೋಗೇಂದ್ರ ಯಾದವ್ ಕೇಳಿದ್ದಾರೆ.

**ಅಂತಿಮ ಪಟ್ಟಿಯಲ್ಲಿ ಬಡವರು, ದಲಿತರ ಹೆಸರು ಸೇರಿಸಿಲ್ಲ– ಪ್ರತಿಪಕ್ಷಗಳ ಆರೋಪ**

ಕಾಂಗ್ರೆಸ್ ಪಕ್ಷವು ಅಂತಿಮ ಮತದಾರರ ಪಟ್ಟಿಯನ್ನು ತೀವ್ರವಾಗಿ ಟೀಕಿಸಿದೆ. ಎಸ್‌ಐಆರ್ ಅನ್ಯಾಯ ಮತ್ತು ಪಾರದರ್ಶಕತೆ ಕೊರತೆಯಿಂದ ಕೂಡಿದೆ ಎಂದಿದೆ.

ಎಸ್‌ಐಆರ್ ಪ್ರಕ್ರಿಯೆಯು ಆರಂಭದಿಂದಲೂ ದೋಷಪೂರಿತವಾಗಿದೆ. ಆದರೂ ಚುನಾವಣಾ ಆಯೋಗ ಎಸ್‌ಐಆರ್ ಯಶಸ್ವಿಯಾಗಿದೆ ಎಂದು ಘೋಷಿಸಿದೆ. 68 ಲಕ್ಷಕ್ಕೂ ಹೆಚ್ಚು ಮತದಾರರನ್ನು ಪಟ್ಟಿಯಿಂದ ಕೈಬಿಡಲಾಗಿದೆ ಮತ್ತು ಕೇವಲ 21.53 ಲಕ್ಷ ಹೆಸರುಗಳನ್ನು ಮಾತ್ರ ಸೇರಿಸಲಾಗಿದೆ. ಜನರ ಮತದಾನದ ಹಕ್ಕನ್ನು ರಕ್ಷಿಸಲು ನಮ್ಮ ಪಕ್ಷವು ಎಲ್ಲಾ ಪ್ರಯತ್ನಗಳನ್ನು ಮಾಡುತ್ತದೆ ಎಂದು ಬಿಹಾರ ಕಾಂಗ್ರೆಸ್ ಅಧ್ಯಕ್ಷ ರಾಜೇಶ್ ಕುಮಾರ್ ಹೇಳಿದ್ದಾರೆ.

ನಮ್ಮ ಶತ ಪ್ರಯತ್ನಗಳ ಹೊರತಾಗಿಯೂ ಬಡವರು, ದಲಿತರು, ಅತ್ಯಂತ ಹಿಂದುಳಿದವರು ಮತ್ತು ಹಿಂದುಳಿದ ವರ್ಗಗಳ ಹೆಸರುಗಳನ್ನು ಪಟ್ಟಿಯಲ್ಲಿ ಸೇರಿಸಿಲ್ಲ. ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಕನಿಷ್ಠ 10,000 ಹೆಸರುಗಳನ್ನು ತೆಗೆದುಹಾಕಲಾಗಿದೆ ಎಂದು ಕಂಡುಕೊಂಡಿದ್ದೇವೆ ಎಂದು ರಾಷ್ಟ್ರೀಯ ಜನತಾ ದಳ (ಆರ್‌ಜೆಡಿ) ವಕ್ತಾರ ಶಕ್ತಿ ಸಿಂಗ್ ಯಾದವ್ ತಿಳಿಸಿದ್ದಾರೆ.

**ಗದಗ ಎಸ್‌ಎಸ್‌ಕೆ ಸಮಾಜದ ನಮ್ಮೂರ ದಸರಾ ಕಾರ್ಯಕ್ರಮದಲ್ಲಿ ಆನಂದ ಬದಿ**

# ಮಕ್ಕಳಿಗೆ ಮನೆಯಿಂದಲೇ ಉತ್ತಮ ಸಂಸ್ಕಾರ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಎಸ್‌ಎಸ್‌ಕೆ ಸಮಾಜದವರು ತಮ್ಮ ಮಕ್ಕಳ ಭವಿಷ್ಯದ ದೃಷ್ಟಿಯಿಂದ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡಬೇಕು ಎಂದು ನಗರಸಭೆಯ ಪರಿಸರ ಅಭಿಯಂತರ ಆನಂದ ಬದಿ ಹೇಳಿದರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರ್ಬಾರ ವೇದಿಕೆಯಲ್ಲಿ ಜರುಗಿದ ನಮ್ಮೂರ ದಸರಾ–2025ರ 8ನೇದಿನದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಕಡುಬಡತನದಲ್ಲಿ ಬೆಳೆದ ನನಗೆ ಉನ್ನತ ಶಿಕ್ಷಣ ಪಡೆಯಲು ಸಮಾಜದ ಮಾಜಿ ಅಧ್ಯಕ್ಷರಾದ ದಿ. ಆರ್.ಎನ್. ಬಾಕಳೆ ಸೇರಿದಂತೆ ಸಮಾಜದ ಹಿರಿಯರು ಆರ್ಥಿಕ ನೆರವು ನೀಡಿ ಬೆಳೆಸಿದ್ದರಿಂದ ನಾನು ಇಂದು ಸರಕಾರಿ ನೌಕರನಾಗಿ ಉತ್ತಮ ಹುದ್ದೆಯಲ್ಲಿದ್ದು ಸೇವೆ ಮಾಡುತ್ತಿದ್ದೇನೆ. ಅಂದು ನನಗೆ ಸಮಾಜದ ಹಿರಿಯರು ಪ್ರೋತ್ಸಾಹಿಸದೆ ಇದ್ದರೆ ಇಂದು ನಾನು ಹೀಗೆ ಇರುತ್ತಿರುಲಿಲ್ಲ. ಆದ್ದರಿಂದ ಸಮಾಜದ ಯುವಕರು ಉನ್ನತ ಶಿಕ್ಷಣ ಪಡೆದು ಸಮಾಜದ ಋಣ ತಿರಿಸಿಬೇಕು ಎಂದು ಹೇಳಿದರು.



ಇದೇ ಸಂದರ್ಭದಲ್ಲಿ ಎಸ್‌ಎಸ್‌ಕೆ ಸಮಾಜದ ಕೃಷ್ಣಪ್ರಿಯಾ ಆನಂದಸಾ ಬದಿ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯಿಂದ ನಡೆದ ರಾಜ್ಯಮಟ್ಟದ ಕಲಾಶ್ರೀ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿ ದೆಹಲಿಗೆ ತೆರಳುತ್ತಿರುವದರಿಂದ ಅವರನ್ನು ಹಾಗೂ ಇವರ ಸಹೋದರಿಯಾದ ತನುಶ್ರೀ ಆನಂದಸಾ ಬದಿ ಅವರನ್ನು ಸಮಾಜದ ವತಿಯಿಂದ ಸನ್ಮಾನಿಸಿ ಶುಭ ಹಾರೈಸಿದರು.

ಎಸ್‌ಎಸ್‌ಕೆ ಸಮಾಜದ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ಉಪಾಧ್ಯಕ್ಷ ರಾಜು ಬದಿ, ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ, ರವಿ ಶಿದ್ಲಿಂಗ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಪಂಚ ಕಮಿಟಿ ಸದಸ್ಯರಾದ ಸುರೇಶಕುಮಾರ ಬದಿ, ಪರಶುರಾಮ ಬದಿ, ಬಲರಾಮ ಬಸವಾ, ವಿಷ್ಣುಸಾ ಶಿದ್ಲಿಂಗ, ಮಾರುತಿ ಪವಾರ, ಪ್ರಕಾಶ ಬಾಕಳೆ, ಶ್ರೀನಿವಾಸ ಬಾಂಡಗೆ, ಅಂಬಾಸಾ ಖಟವಟೆ, ವಿನೋದ ಬಾಂಡಗೆ, ತರುಣ ಸಂಘದ ವಿಶ್ವನಾಥಸಾ ಸೋಳಂಕಿ, ರಾಘು ಬಾರಡ, ಶ್ರೀಕಾಂತ ಬಾಕಳೆ, ಸುಧೀರ ಕಾಟಿಗರ, ನಾಗರಾಜ ಖೋಡೆ, ಮಹಿಳಾ ಮಂಡಳದ ಅಧ್ಯಕ್ಷೆ ಉಮಾಬಾಯಿ ಬೇವಿನಕಟ್ಟಿ, ಗೀತಾಬಾಯಿ ಹಬೀಬ ಮುಂತಾದವರಿದ್ದರು.

ಅನಿಲ್ ಖಟವಟೆ ಸ್ವಾಗತಿಸಿದರು. ಜಿ.ಎನ್. ಹಬೀಬ ನಿರೂಪಿಸಿದರು. ಮೋತಿಲಾಲಸಾ ಪೂಜಾರಿ ವಂದಿಸಿದರು.



ಗದಗ: ದಸರಾ ಹಬ್ಬದ ಸಂಭ್ರಮದ ಅಂಗವಾಗಿ ಇಲ್ಲಿನ ಮುಳಗುಂದ ರಸ್ತೆಯ ಸಿದ್ದಗಂಗಾ ನಗರದ ದುರ್ಗಾಪರಮೇಶ್ವರಿ ಮಹಿಳಾ ಗ್ರೂಪ್‌ನ ಸದಸ್ಯರು ಹತ್ತನೇ ದಿನದಂದು ನೇರಳೆ ಬಣ್ಣದ ಸೀರೆಯನ್ನುಟ್ಟು ಸಂಭ್ರಮಿಸಿದರು.



ಗದಗ: ದಸರಾ ಹಬ್ಬದ ಸಂಭ್ರಮದ ಅಂಗವಾಗಿ ಇಲ್ಲಿನ ಮುಳಗುಂದ ರಸ್ತೆಯ ಸಿದ್ದಗಂಗಾ ನಗರದ ದುರ್ಗಾಪರಮೇಶ್ವರಿ ಮಹಿಳಾ ಗ್ರೂಪ್‌ನ ಸದಸ್ಯರು ಹತ್ತನೇ ದಿನದಂದು ನೇರಳೆ ಬಣ್ಣದ ಸೀರೆಯನ್ನುಟ್ಟು ಸಂಭ್ರಮಿಸಿದರು.




ವಿಶ್ವ ಹೃದಯ ದಿನಾಚರಣೆಯ ಅಂಗವಾಗಿ ಗದಗ ನಗರದ ಸ್ಮೈಲ್ ಫೌಂಡೇಶನ್ ಫಿಲಿಪ್ಸ್ ಸಹಕಾರ ಸಂಸ್ಥೆ ವತಿಯಿಂದ ಹಾತಲಗೇರಿ ಗ್ರಾಮದಲ್ಲಿ ಮಾಹಿತಿ ಕಾರ್ಯಾಗಾರ ಹಾಗೂ ಆರೋಗ್ಯ ತಪಾಸಣೆ ಹಮ್ಮಿಕೊಳ್ಳಲಾಗಿತ್ತು. ಕಾರ್ಯಾಗಾರದಲ್ಲಿ ಜನರಿಗೆ ಹೃದಯ ಆರೋಗ್ಯದ ಕುರಿತು, ಆಹಾರದ ಕ್ರಮದ ಬಗ್ಗೆ, ದೈನಂದಿನ ಜೀವನದ ಕ್ರಮದ ಕುರಿತು ಮಾಹಿತಿ ತಿಳಿಸಲಾಯಿತು.

# ಯೋಗವು ಸಾಮಾಜಿಕ ಸುಧಾರಣೆಗೆ ಸಾಧನ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ವತಿಯಿಂದ ಶ್ರೀ ಕರಿಯಮ್ಮ ದೇವಿ ದೇವಸ್ಥಾನದಲ್ಲಿ ದುರ್ಗಾ ನಮಸ್ಕಾರ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬಸನಗೌಡ ಹಿರೇಗೌಡರ ಮಾತನಾಡಿ, ದೈಹಿಕ ಮತ್ತು ಮಾನಸಿಕ ಯೋಗಕ್ಷೇಮಕ್ಕೆ ಯೋಗವು ಅತ್ಯಂತ ಲಾಭದಾಯಕವಾಗಿದೆ ಎಂದು ಗುರುತಿಸಲು ಇದನ್ನು ಆಚರಿಸಲಾಗುತ್ತದೆ. ಯೋಗವು ದೇಹವನ್ನು ಬಲಪಡಿಸುತ್ತದೆ, ಮನಸ್ಸನ್ನು ಶಾಂತಗೊಳಿಸುತ್ತದೆ ಮತ್ತು ಸ್ವಯಂ–ಅರಿವನ್ನು ಹೆಚ್ಚಿಸುತ್ತದೆ ಎಂದರು.



ಮನುಷ್ಯನಿಗೆ ಬಾಹ್ಯ ಸೌಂದರ್ಯ ಎಷ್ಟು ಮುಖ್ಯವೋ, ಆಂತರಿಕ ಸೌಂದರ್ಯವೂ ಅಷ್ಟೇ ಮುಖ್ಯವಾಗಿರುತ್ತದೆ. ಇವೆರಡನ್ನೂ ಚೆನ್ನಾಗಿ ಇಟ್ಟುಕೊಳ್ಳಲು ಯೋಗವು ಪ್ರಮುಖ ಪಾತ್ರವನ್ನು ವಹಿಸುತ್ತದೆ. ಪ್ರತಿ ನಿತ್ಯ ಯೋಗ ಮಾಡುವುದರಿಂದ ಉತ್ತಮವಾದ ಆರೋಗ್ಯಕರ ಜೀವನವನ್ನು ನಡೆಸಬಹುದಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸುಜಾತಾ ಬರದೂರ ವಹಿಸಿದ್ದರು. ಮಂಜುನಾಥ ಕೊಪ್ಪಳ ಕಾರ್ಯಕ್ರಮ ನಿರೂಪಿಸಿದರು. ಜ್ಯೋತಿ ಮ್ಯಾಗೇರಿ ವಂದಿಸಿದರು. ಜಿಲ್ಲಾ ಸಂಚಾಲಕರ ನೇತೃತ್ವದಲ್ಲಿ ಯೋಗ ಶಿಬಿರಾರ್ಥಿಗಳಿಗೆ ಯೋಗ ತರಬೇತಿ ನೀಡಲಾಯಿತು.

## ಅತಿಥಿ ಉಪನ್ಯಾಸಕರ ಹಿತ ಕಾಪಾಡಿದ ಕಾನೂನು ಸಚಿವ ಡಾ. ಹೆಚ್.ಕೆ. ಪಾಟೀಲ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಹಿತ ಕಾಪಾಡಿದ ಕಾನೂನು ಸಚಿವರಾದ ಡಾ. ಹೆಚ್.ಕೆ. ಪಾಟೀಲರಿಗೆ ರಾಜ್ಯ ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ಪರವಾಗಿ ಸಂಘದ ಅಧ್ಯಕ್ಷ ಡಾ. ಹನುಮಂತಗೌಡ ಆರ್.ಕಲ್ಮನಿಯವರು ಅಭಿನಂದಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಳೆದ ಎರಡು ತಿಂಗಳಿಂದ ರಾಜ್ಯ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಯುಜಿಸಿ ಮತ್ತು ನಾನ್ ಯುಜಿಸಿ ಎಂಬ ಗೊಂದಲದಲ್ಲಿದ್ದ ಸಮಸ್ಯೆಯನ್ನು ಸಚಿವರಾದ ಡಾ. ಹೆಚ್.ಕೆ. ಪಾಟೀಲರ ಅಧ್ಯಕ್ಷತೆಯಲ್ಲಿ ಬೆಂಗಳೂರಿನ ಉನ್ನತ ಶಿಕ್ಷಣ ಪರಿಷತ್‌ನಲ್ಲಿ ನಡೆದ ಸಭೆಯಲ್ಲಿ ಶಿಕ್ಷಣ ಸಚಿವರಾದ ಡಾ. ಎಂ.ಸಿ. ಸುಧಾಕರ್, ಅಡ್ವೊಕೇಟ್ ಜನರಲ್, ಉನ್ನತ ಶಿಕ್ಷಣ ಇಲಾಖೆಯ ಆಯುಕ್ತರಾದ ಮಂಜುಶ್ರೀ ಅತಿಥಿ ಉಪನ್ಯಾಸಕರ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿ ಪರಿಹರಿಸಿದ್ದಾರೆ.

ಆದಷ್ಟು ಬೇಗ ಕಾನೂನು ತಿದ್ದುಪಡಿ ಮಾಡಿ, ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಕಾಯಂ ಮಾಡಬೇಕು ಎಂದು ಮನವಿ ಮಾಡಲಾಗಿದೆ. ಶೀಘ್ರದಲ್ಲೇ ಗದುಗಿನಲ್ಲಿ ರಾಜ್ಯ ಮಟ್ಟದ ಶೈಕ್ಷಣಿಕ ಸಮಾವೇಶವನ್ನು ಹಮ್ಮಿಕೊಳ್ಳಲಾಗುವುದು ಎಂದು ರಾಜ್ಯಾಧ್ಯಕ್ಷರಾದ ಡಾ. ಹನುಮಂತಗೌಡ ಆರ್.ಕಲ್ಮನಿ, ವಿ.ಎಸ್. ದೇಸಾಯಿಗೌಡ್ರ, ಡಾ. ವಿ.ಡಿ. ಮುಳಗುಂದ, ಕೆ.ಜಿ. ಬೆಂತೂರ, ಶರಣು ಮರಿಗುದ್ದಿ, ಭಗತ್ ಸಿಂಗ್ ನವಲೂರಕರ, ಪದ್ಮಾ ತಳಕಲ್, ಪಾರ್ವತಿ ತಾರಿಹಾಳ, ಗೀತಾ ಮೇಟಿ, ಜ್ಯೋತಿ ಗುದ್ದಿನ ಸೇರಿದಂತೆ ಅತಿಥಿ ಉಪನ್ಯಾಸಕರು ತಿಳಿಸಿದ್ದಾರೆ.

**ಶ್ರೀ ಅಡವೀಂದ್ರಸ್ವಾಮಿ ಮಠದಲ್ಲಿ ಡಾ. ರಾಜಗುರು ಗುರುಸ್ವಾಮಿ ಕಲಕೇರಿಯವರಿಂದ ಶ್ರೀದೇವಿ ಪುರಾಣ ಪ್ರವಚನ**

# ಶ್ರೀದೇವಿಯ ಆರಾಧನೆಯಿಂದ ಆಂತರಿಕ ಶಕ್ತಿ ವೃದ್ಧಿ

■ವಿಜಯಸಾಕ್ಷಿ ಸುದ್ದಿ, ಗದಗ

ನವರಾತ್ರಿ ಹಬ್ಬದಲ್ಲಿ ದುರ್ಗಾ ದೇವಿಯ 9 ಅವತಾರಗಳಿಗೆ ಪೂಜೆ ಸಲ್ಲಿಸಲಾಗುತ್ತದೆ. ಈ ಆರಾಧನೆಯು ಪುರಾಣ ಕಥೆಯ ಅನುಸಾರವಾಗಿ ದುಷ್ಟ ಮಹಿಷಾಸುರನ ಸಂಹಾರಕ್ಕಾಗಿ ದೇವಿ ಹೇಗೆ ಅವತಾರ ತಾಳಿದಳೋ ಅದೇ ಅನುಕ್ರಮದಲ್ಲಿ ನಡೆಯುತ್ತದೆ ಎಂದು ಡಾ. ರಾಜಗುರು ಗುರುಸ್ವಾಮಿ ಕಲಕೇರಿ ಹೇಳಿದರು.

ನಗರದ ಮುಳಗುಂದನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದ ಶ್ರೀಅನ್ನಪೂರ್ಣೇಶ್ವರಿ ಸನ್ನಿಧಿಯಲ್ಲಿ ದಸರಾ ಮಹೋತ್ಸವ ಮತ್ತು ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನವರಾತ್ರಿಯ ವ್ರತಾಚರಣೆಯ 5ನೇ ದಿನ ಆರಾಧನೆಗೆ ಪಾತ್ರವಾಗುವ ಜಗನ್ಮಾತೆಯ ಸ್ವರೂಪವೇ ಸ್ಕಂದಮಾತೆ. ಪೌರಾಣಿಕ ನಂಬಿಕೆಗಳ ಪ್ರಕಾರ, ಸ್ಕಂದಮಾತೆಯು ತಾಯಿ ಪಾರ್ವತಿಯ ಒಂದು ರೂಪ. ದೇವತೆಗಳ ಸೇನಾಧಿಪತಿಯಾದ ಕುಮಾರ ಕಾರ್ತಿಕೇಯನಿಗೆ (ಸ್ಕಂದ) ತಾಯಿಯಾದ್ದರಿಂದಲೇ ಆಕೆಗೆ ಈ ಹೆಸರು ಬಂದಿದೆ ಎಂದರು. ಒಂದು ಕಥೆಯ ಪ್ರಕಾರ, ತಾಯಿ ಪಾರ್ವತಿಯು ಕೋಪಗೊಂಡು ಕುಮಾರ ಕಾರ್ತಿಕೇಯನನ್ನು ರಕ್ಷಿಸಲು ಆದಿಶಕ್ತಿಯ ರೂಪದಲ್ಲಿ ಕಾಣಿಸಿಕೊಂಡಾಗ, ಇಂದ್ರನು ಭಯದಿಂದ ನಡುಗಲು ಪ್ರಾರಂಭಿಸಿದನು. ನಂತರ



ಇಂದ್ರನು ತನ್ನ ಪ್ರಾಣವನ್ನು ಉಳಿಸಿಕೊಳ್ಳಲು ದೇವಿಯ ಬಳಿ ಕ್ಷಮೆಯನ್ನು ಕೇಳಿದನು. ಈ ಪರಾಕ್ರಮದಿಂದಾಗಿ, ಎಲ್ಲಾ ದೇವತೆಗಳು ದುರ್ಗಾ ದೇವಿಯ ಈ ರೂಪವನ್ನು ಸ್ಕಂದಮಾತೆ ಎಂದು ಕರೆದು ಆಕೆಯನ್ನು ಸ್ತುತಿಸಲು ಪ್ರಾರಂಭಿಸಿದರು. ಆಕೆ ಪದ್ಮಾಸನಾ ದೇವಿ ಎಂದೂ ಪ್ರಸಿದ್ಧಳಾಗಿದ್ದಾಳೆ ಎಂದು ಅವರು ಹೇಳಿದರು.

ನವರಾತ್ರಿಯ 5ನೇ ದಿನದಂದು ಸ್ಕಂದಮಾತೆಯ ಆರಾಧನೆ ಮಾಡುವ ಭಕ್ತರು ಆಕೆಯ ಕೃಪಾದೃಷ್ಟಿಯಿಂದ ಶಾಂತಿ, ಸಮಾಧಾನ, ಆಂತರಿಕ ಶಕ್ತಿ ಮತ್ತು ತೇಜಸ್ಸನ್ನು ಪಡೆಯುತ್ತಾರೆ ಎಂಬ ನಂಬಿಕೆ ಇದೆ. ವಿಶೇಷವಾಗಿ, ಸಂತಾನ ಬಯಸುವ ದಂಪತಿಗಳು ಈ ದಿನದ ಪೂಜೆಯಿಂದ ಅಪಾರ ಅನುಗ್ರಹವನ್ನು ಪಡೆಯುತ್ತಾರೆ ಎಂಬ ನಂಬಿಕೆ ಜನಮಾನಸದಲ್ಲಿ ಬೇರೂರಿದೆ ಎಂದರು.

ಮಹಾನ್ ವೀರನಾದ ಸ್ಕಂದನಿಗೆ ತಾಯಿಯಾದ್ದರಿಂದ ದುರ್ಗಾ ದೇವಿಯ ಈ ರೂಪಕ್ಕೆ ಸ್ಕಂದಮಾತಾ ಎಂದು ಹೆಸರು ಬಂದಿದೆ. ಈ ರೂಪವು ಮಾತೃತ್ವದ ಪ್ರೀತಿ, ಶಕ್ತಿ ಮತ್ತು ದುಷ್ಟ ಶಕ್ತಿಗಳ ನಾಶದ ಸಂಕೇತವಾಗಿದೆ. ಪಾರಿಜಾತ ಹೂವುಗಳಿಂದ ದೇವಿಯನ್ನು ಪೂಜಿಸುವುದು ಅತ್ಯಂತ ಶುಭಕರವಾಗಿದ್ದು, ಸ್ಕಂದಮಾತೆಯನ್ನು ಭಕ್ತಿಯಿಂದ ಆರಾಧಿಸುವುದರಿಂದ ಭಕ್ತರ ಬಡತನ ನಿವಾರಣೆಯಾಗುತ್ತದೆ ಮತ್ತು ಜೀವನದಲ್ಲಿ ಸುಖ-ಶಾಂತಿ ನೆಲೆಸುತ್ತದೆ ಎಂಬ ಬಲವಾದ ನಂಬಿಕೆಯಿದೆ ಎಂದು ಅವರು ಹೇಳಿದರು. ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಪುರಾಣ ಪಠಿಸಿದರು. ಪಕ್ರುಸಾಬ ಮುಲ್ಲಾ, ಜಗನ್ನಾಥ ಕಲಬುರಗಿ, ಶರಣಕುಮಾರ ಗುತ್ತರಗಿ, ಎಸ್.ಬಿ. ಭಜಂತ್ರಿ ಸಂಗೀತ ಸೇವೆ ನೀಡಿದರು. ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಸಮ್ಮುಖ ವಹಿಸಿದ್ದರು. ಶ್ರೀ ಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷ ಎಸ್.ಪಿ. ಸಂಶಿಮಠ, ಅಧ್ಯಕ್ಷ ಸದಾಶಿವಯ್ಯ ಮದರಿಮಠ, ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಗುಡಿಮನಿ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ, ಪೂಜಾ ಸಮಿತಿ ಅಧ್ಯಕ್ಷರಾದ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಜಾತ್ರಾ ಮಹೋತ್ಸವ ಸಮಿತಿ ಕಾರ್ಯದರ್ಶಿ ಗೀತಾ ಎಂ.ಹೂಗಾರ, ಸಹಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ್ರ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

> ನವರಾತ್ರಿಯ ಸಂದರ್ಭದಲ್ಲಿ ಆರಾಧಿಸಲ್ಪಡುವ ಸ್ಕಂದಮಾತೆಯು ತಾಯಿ ಪಾರ್ವತಿಯ ಮತ್ತೊಂದು ಭವ್ಯ ರೂಪ. ಈಕೆ ದೇವತೆಗಳ ಸೇನಾಧಿಪತಿಯಾದ ಸುಬ್ರಹ್ಮಣ್ಯನ (ಕುಮಾರ ಕಾರ್ತಿಕೇಯ) ತಾಯಿ ಎಂದು ಪ್ರಸಿದ್ಧಳು. ಈ ದೇವಿಯನ್ನು ಆರೋಗ್ಯ ಮತ್ತು ಸಂಪತ್ತಿನ ಪ್ರತೀಕವೆಂದು ಪರಿಗಣಿಸಲಾಗುತ್ತದೆ. ಪುರಾಣಗಳಲ್ಲಿ, ಆಕೆಯನ್ನು ದೇವತೆಗಳ ಸೈನ್ಯದ ನಾಯಕಿ ಎಂದು ಉಲ್ಲೇಖಿಸಲಾಗಿದೆ ಎಂದು ಡಾ. ರಾಜಗುರು ಗುರುಸ್ವಾಮಿ ಕಲಕೇರಿ ಹೇಳಿದರು.

**ಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ, ಶ್ರೀದೇವಿ ಪುರಾಣ ಪ್ರವಚನ**

# ಮಠಗಳು ಎಲ್ಲರಿಗೂ ಜ್ಞಾನ, ಸಂಸ್ಕಾರ ಕಲಿಸಿವೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದಲ್ಲಿ ಮಠಗಳು ಜಾತಿ, ಧರ್ಮ, ಹೆಣ್ಣು, ಗಂಡು ಎಂಬ ಬೇದ ಭಾವವಿಲ್ಲದೆ ಎಲ್ಲರನ್ನು ಸಮಾನವಾಗಿ ಕಾಣುತ್ತಿವೆ. ಮಠಗಳು ಹಸಿದವರಿಗೆ ಅನ್ನ ನೀಡಿವೆ, ಜ್ಞಾನ, ಸಂಸ್ಕಾರ ಕಲಿಸಿವೆ ಎಂದು ಡಾ. ಶ್ರೀಧರ ವಿ.ಕುರಡಗಿ ಹೇಳಿದರು.

ನಗರದ ಮುಳಗುಂದನಾಕಾ ಬಳಿಯ ಶ್ರೀ ಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ, ಶ್ರೀದೇವಿ ಪುರಾಣ ಪ್ರವಚನ ಹಾಗೂ ದುರ್ಗಾಷ್ಟಮಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗದಗ-ಬೆಟಗೇರಿ ಅವಳಿ ನಗರದ ಅಡವೀಂದ್ರಸ್ವಾಮಿ ಮಠದಲ್ಲಿ ನವರಾತ್ರಿಯ ಸಂದರ್ಭದಲ್ಲಿ ಶ್ರೀದೇವಿಯ ಆರಾಧನೆಯ ಮೂಲಕ ಮಹಿಳೆಯರಲ್ಲಿ ದೈವಭಕ್ತಿ ಜಾಗೃತಿ ಮೂಡಿಸುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ. ಶ್ರೀಮಠದಲ್ಲಿ ಶ್ರೀಅನ್ನಪೂರ್ಣೇಶ್ವರಿ ದೇವಿಯ




> ಸಮ್ಮುಖ ವಹಿಸಿದ್ದ ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಶ್ರೀದೇವಿಯ ಪೂಜೆ, ಆರಾಧನೆ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಡಾ. ಸುನೀತಾ ಶ್ರೀಧರ ಕುರಡಗಿ, ಗದಗ ಜಿಲ್ಲಾ ಸಂಸ್ಕಾರ ಭಾರತಿ ಅಧ್ಯಕ್ಷ ಪಿ.ಎ. ಕುಲಕರ್ಣಿ, ಪರಿಮಳಾ ಕುಲಕರ್ಣಿ ಪಾಲ್ಗೊಂಡಿದ್ದರು.

ಜಾತ್ರೆಯನ್ನು ನೆರವೇರಿಸಲಾಗುತ್ತಿದೆ. ಇಲ್ಲಿನ ವಿಶೇಷ ಎಂದರೆ, ಮಹಿಳೆಯರಿಂದಲೇ ಶ್ರೀಅನ್ನಪೂರ್ಣೇಶ್ವರಿ ದೇವಿಯ ರಥೋತ್ಸವ ನಡೆಯುತ್ತದೆ. ಮಹಿಳೆಯರು ಜಾತ್ರೆಯಲ್ಲಿ ಭಾಗವಹಿಸಿ ಧನ್ಯರಾಗಬೇಕು ಎಂದು ಹೇಳಿದರು. ಶ್ರೀ ಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷ ಎಸ್.ಪಿ. ಸಂಶಿಮಠ, ಅಧ್ಯಕ್ಷ ಸದಾಶಿವಯ್ಯ ಮದರಿಮಠ, ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಗುಡಿಮನಿ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ ಮುಂತಾದ ಗಣ್ಯರು ವೇದಿಕೆಯಲ್ಲಿದ್ದರು. ಶ್ರೀ ಅನ್ನಪೂರ್ಣೇಶ್ವರಿ ಸನ್ನಿಧಿಯಲ್ಲಿ ಡಾ. ರಾಜಗುರು ಗುರುಸ್ವಾಮಿ ಕಲಕೇರಿ ಅವರಿಂದ ಪುರಾಣ ಪ್ರವಚನ ನಡೆಯಿತು. ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಪುರಾಣ ಪಠಿಸಿದರು. ಪಕ್ರುಸಾಬ ಮುಲ್ಲಾ, ಜಗನ್ನಾಥ ಕಲಬುರಗಿ, ಶರಣಕುಮಾರ ಗುತ್ತರಗಿ, ಎಸ್.ಬಿ. ಭಜಂತ್ರಿ ಸಂಗೀತ ಸೇವೆ ನೀಡಿದರು. ಪೂಜಾ ಸಮಿತಿ ಅಧ್ಯಕ್ಷರಾದ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಜಾತ್ರಾ ಮಹೋತ್ಸವ ಸಮಿತಿ ಕಾರ್ಯದರ್ಶಿ ಗೀತಾ ಎಂ.ಹೂಗಾರ, ಸಹಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ್ರ ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ಸಮಾರಂಭದಲ್ಲಿ ವಿವಿಧ ಭಕ್ತಿಸೇವೆ ವಹಿಸಿದ್ದ ನಿರಂಜನ ಮಲ್ಲಾಪೂರ, ಜಿ.ಎಂ. ಯಾನಮಶೆಟ್ಟಿ, ಆನಂದ ಬಸ್ತಿ, ನೀಲಮ್ಮ ವೀರಯ್ಯ ವಿಭೂತಿಮಠ ಅವರಿಗೆ ಗುರುರಕ್ಷೆ ನೀಡಲಾಯಿತು. ಮಂಗಲಾ ಬಿ.ಯಾನಮಶೆಟ್ಟಿ ಸ್ವಾಗತಿಸಿದರು. ಪ್ರಕಾಶ ಬಂಡಿ ಕಾರ್ಯಕ್ರಮ ನಿರೂಪಿಸಿದರು. ಸುರೇಖಾ ಎಸ್.ಪಿಳ್ಳಿ ವಂದಿಸಿದರು.


# ಸಂಸ್ಥೆಯನ್ನು ಸಮರ್ಥವಾಗಿ ಬೆಳೆಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಮುದಾಯದ ಏಳಿಗೆಗೆ ಸಹಕಾರ ಸಂಘ ಉಪಯುಕ್ತವಾಗಿದೆ. ಸ್ವಾಭಿಮಾನದ ಬದುಕು ಕಟ್ಟಿಕೊಡಲು ಸಹಕಾರಿಯಾಗಿದೆ. ತಾವೆಲ್ಲ ಪದಾಧಿಕಾರಿಗಳು ಸಂಸ್ಥೆಯನ್ನು ಸಮರ್ಥವಾಗಿ ಬೆಳೆಸಿ. ನಾವೆಲ್ಲರೂ ಸಹಕಾರ ಹಾಗೂ ಶಕ್ತಿ ತುಂಬುತ್ತೇವೆ ಎಂದು ಕಾನೂನು, ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಗದುಗಿನಲ್ಲಿ ಇತ್ತೀಚೆಗೆ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಪತ್ತಿನ ಸಹಕಾರ ಸಂಘವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮನೋರಮಾ ಕಾಲೇಜಿನ ಪ್ರಾಚಾರ್ಯ ಬಿ.ಎಸ್. ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಭೆಯ ಅಧ್ಯಕ್ಷತೆಯನ್ನ ನಿಜಶರಣ ಅಂಬಿಗರ ಚೌಡಯ್ಯನವರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸಂಗಮೇಶ ಹಾದಿಮನಿ ವಹಿಸಿದ್ದರು. ಈ ಸಂದರ್ಭದಲ್ಲಿ ಎಚ್.ಕೆ. ಪಾಟೀಲ ಸೇವಾ ತಂಡದ ಅಧ್ಯಕ್ಷ ಪ್ರಭು




ಬುರಬುರೆ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಗದಗ ತಾಲೂಕು ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಕಾಂಗ್ರೆಸ್ ಮೀನುಗಾರರ ವಿಭಾಗದ ಜಿಲ್ಲಾಧ್ಯಕ್ಷ ಗುರಪ್ಪ ತಿರ್ಲಾಪೂರ, ನಿಜಶರಣ ಅಂಬಿಗರ ಚೌಡಯ್ಯನವರ ಪತ್ತಿನ ಸಹಕಾರ ಸಂಘದ ಉಪಾಧ್ಯಕ್ಷ ಹರೀಶ ಬಾರಕೇರ, ನಿರ್ದೇಶಕರಾದ ಮಂಜುನಾಥ ಗುಡಿಸಾಗರ, ಮಧುಶೇಖರ ಪೂಜಾರ, ಅಮಿತ ಪೂಜಾರ, ಸೋನಿಯಾ ನಿಡಗುಂದಿ, ಬಸವರಾಜ ಮೊಕಾಶಿ, ರವಿಕುಮಾರ ಗುಡಿಸಾಗರ, ಮುಖ್ಯ ಕಾರ್ಯನಿರ್ವಾಹಕ ಭುವನೇಶ್ವರಿ ಹಾದಿಮನಿ, ಸುಜಾತ ಗುಡಿಸಾಗರ, ಸೌಮ್ಯ ಸುಣಗಾರ, ಕವಿತಾ ಗುಡಿಸಾಗರ, ಚಂದ್ರಕಾಂತ ಬಾರಕೇರ, ಲಕ್ಷ್ಮೀ ಹರೀಶ ಬಾರಕೇರ, ಪುಷ್ಪಾ ನಿಡಗುಂದಿ, ರವಿಕುಮಾರ ನಿಡಗುಂದಿ, ಗಿರಿಜಾ ಬಾರಕೇರ, ಸಮಾಜದ ಹಿರಿಯರು ಹಾಗೂ ಯುವಕರು ಉಪಸ್ಥಿತರಿದ್ದರು.

ಪ್ರೊ. ಹೇಮಂತ ದಳವಾಯಿ ಸ್ವಾಗತಿಸಿದರು.

# ಬಿಜೆಪಿಯಿಂದ 'ನಮೋ ಯುವ ರನ್'



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲೆ ಹಾಗೂ ಯುವ ಮೋರ್ಚಾ ಗದಗ ನಗರ ಮಂಡಲ ವತಿಯಿಂದ ಸ್ವಚ್ಛ ಭಾರತ, ನಶಾ ಮುಕ್ತ ಭಾರತ, ವೋಕಲ್ ಫಾರ್ ಲೋಕಲ್‌ನಂತಹ ರಾಷ್ಟ್ರೀಯ ಅಭಿಯಾನಗಳ ಸಂದೇಶದೊಂದಿಗೆ ಗದಗ ನಗರದ ಪ್ರಮುಖ ರಸ್ತೆಗಳಲ್ಲಿ ಬೃಹತ್ ಮ್ಯಾರಥಾನ್ ಓಟ ನಡೆಯಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ನಿಗಮ ಮಂಡಳಿ ಮಾಜಿ ಅಧ್ಯಕ್ಷ ಎಂ.ಎಸ್. ಕರೀಗೌಡ್ರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ, ಸೇವಾ ಪಾಕ್ಷಿಕ ಸಂಚಾಲಕ ಲಿಂಗರಾಜ ಪಾಟೀಲ, ಯುವ ಮೋರ್ಚಾ ಜಿಲ್ಲಾಧ್ಯಕ್ಷ, ಮ್ಯಾರಥಾನ್ ಸಂಚಾಲಕ ಸಂತೋಷ ಅಕ್ಕಿ, ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಯುವ ಮೋರ್ಚಾ ಗದಗ ನಗರ ಮಂಡಲ ಅಧ್ಯಕ್ಷ ನವೀನ ಕೊಟೆಕಲ್, ಪ್ರಧಾನ ಕಾರ್ಯದರ್ಶಿ ಬಸವರಾಜ ನರೇಗಲ್, ಪ್ರಮುಖರಾದ ಅನಿಲ ಅಬ್ಬಿಗೇರಿ, ಶಶಿಧರ ದಿಂಡೂರ, ನಿರ್ಮಲಾ ಕೊಳ್ಳಿ, ಪ್ರಶಾಂತ ಜಾದವ, ರಮೇಶ ಸಜ್ಜಗಾರ, ಕೆ.ಪಿ. ಕೋಟಿಗೌಡ್ರ, ವಿಜಯಲಕ್ಷ್ಮೀ ಮಾನ್ವಿ, ನಾಗರಾಜ ತಳವಾರ, ಕಿರಣ ಕಲಾಲ, ಸಂಗನಾಳ ವಕೀಲರು, ಕಾಳು ತೊಟದ, ರಾಹುಲ್ ಸಂಕಣ್ಣವರ, ಗೋಪಾಲ ಗಡ್ಡದವರ, ಚಂದ್ರು ಒಂಟೆತ್ತಿನವರ, ಸುರೇಶ ಹೆಬಸೂರ, ನವೀನ ಕುರ್ತಕೋಟಿ, ಪಂಚಾಕ್ಷರಿ ಅಂಗಡಿ, ಸ್ವಾತಿ ಅಕ್ಕಿ, ಶ್ರೀಕಾಂತ ಆದೆಪ್ಪನವರ ಮುಂತಾದವರು ಉಪಸ್ಥಿತರಿದ್ದರು.

# ಆರೋಗ್ಯ ತಪಾಸಣಾ ಶಿಬಿರ ಯಶಸ್ವಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ಭಾರತ ಸರ್ಕಾರ, ಕರ್ನಾಟಕ ಸರಕಾರ, ಜಿಲ್ಲಾ ಪಂಚಾಯಿತಿ ಗದಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕು ಆರೋಗ್ಯ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಲಕ್ಕುಂಡಿ ಇವರ ಸಹಯೋಗದಲ್ಲಿ 'ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನ'ದ ಮೂಲಕ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಆರೋಗ್ಯ ಇಲಾಖೆಯ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಡಾ. ಎಸ್.ಎನ್. ಲಿಂಗದಾಳ ಮಾತನಾಡಿ, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಜನ್ಮದಿನದ




ಅಂಗವಾಗಿ ಮಹಾತ್ಮ ಗಾಂಧೀಜಿ ಜಯಂತಿಯವರೆಗೂ ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನದ ಮೂಲಕ ಆರೋಗ್ಯ ತಪಾಸಣಾ ಶಿಬಿರವನ್ನು ಜಿಲ್ಲಾದ್ಯಂತ ಹಮ್ಮಿಕೊಂಡಿದ್ದು, ಗ್ರಾಮೀಣ ಪ್ರದೇಶದ ಜನರಿಗೆ ಅವರ ಮನೆ ಬಾಗಿಲಿಗೆ ತೆರಳಿ ಆರೋಗ್ಯ ತಪಾಸಣೆ ಮಾಡುವದರ ಮೂಲಕ ಆರೋಗ್ಯದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ಈ ಕಾರ್ಯಕ್ರಮ ಸಹಕಾರಿಯಾಗಿದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಮಾತನಾಡಿ, ಸ್ವಸ್ಥ ನಾರಿ ಎಂದರೆ ಉತ್ತಮ ಆರೋಗ್ಯವನ್ನು ಹೊಂದಿರುವ ಮಹಿಳೆ. ಮಹಿಳೆಯರು ತಮ್ಮ ಕುಟುಂಬದ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ ಆರೋಗ್ಯವಂತ ಕುಟುಂಬವನ್ನು ನಿರ್ಮಾಣ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಕಣ್ಣಿನ ತಪಾಸಣೆ, ಬಿಪಿ, ಶುಗರ್, ರಕ್ತ ಪರೀಕ್ಷೆ ತಪಾಸಣೆ ಮಾಡಿ ಔಷಧಿಗಳನ್ನು ವಿತರಣೆ ಮಾಡಲಾಯಿತು. ಗ್ರಾ.ಪಂ ಅಧ್ಯಕ್ಷರಾದ ಹನುಮವ್ವ ತಳವಾರ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಗ್ರಾ.ಪಂ ಉಪಾಧ್ಯಕ್ಷ ಹುಚ್ಚೀರಪ್ಪ ಜೋಗಿನ, ನೀಲಪ್ಪ ಗಾಜಿ, ಹನುಮವ್ವ ಕೊಪ್ಪದ, ಲಕ್ಷ್ಮೀ ಗಾಜಿ, ಪಿಡಿಓ ಶಿವಲೀಲಾ ಗೂಳಪ್ಪನವರ, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರಾದ ಯಲ್ಲಪ್ಪ ಎನ್.ಕಡೆಮನಿ, ಶಾಂತಾ ನೂಕಾಪುರ, ಮುತ್ತಣ್ಣ ಹಟ್ಟಿಮನಿ ಸೇರಿದಂತೆ ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮಸ್ಥರು ಪಾಲ್ಗೊಂಡಿದ್ದರು.

# ತೋಟಗಾರಿಕೆ ತರಬೇತಿ ಕಾರ್ಯಾಗಾರ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ಇತ್ತೀಚೆಗೆ ಗದಗ ಜಿಲ್ಲೆಯ ತೋಟಗಾರಿಕೆ ಇಲಾಖೆಯ ಎಲ್ಲ ತಾಂತ್ರಿಕ ಅಧಿಕಾರಿಗಳಿಗಾಗಿ ತ್ರೈಮಾಸಿಕ ತೋಟಗಾರಿಕೆ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸಲಾಗಿತ್ತು.

ಕಾರ್ಯಾಗಾರವನ್ನು ಉದ್ಘಾಟಿಸಿದ ಬೆಳಗಾವಿ ವಿಭಾಗದ ತೋಟಗಾರಿಕೆ ಜಂಟಿ ನಿರ್ದೇಶಕ ಐ.ಕೆ. ದೊಡ್ಡಮನಿ ಗದಗ ಜಿಲ್ಲೆಯಲ್ಲಿ



ತೋಟಗಾರಿಕೆ ಕ್ಷೇತ್ರದಲ್ಲಿ ರೈತರು ಎದುರಿಸುತ್ತಿರುವ ಪ್ರಸ್ತುತ ಕೀಟ ಮತ್ತು ರೋಗಗಳ ಸಮಸ್ಯೆಗಳು ಮತ್ತು ಅವುಗಳ ನಿವಾರಣೋಪಾಯ ಕುರಿತು ಮಾಹಿತಿ ನೀಡಿ ರೈತರಿಗೆ ಹಾಗೂ ತಾಂತ್ರಿಕ ಅಧಿಕಾರಿಗಳಿಗೆ ಜಾಗೃತಿ ಮೂಡಿಸಿದರು.

ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕೀಟ ಶಾಸ್ತ್ರಜ್ಞ ಡಾ. ಸಿ.ಎಂ. ರಫಿ ಅವರು ಕೀಟ ಮತ್ತು ರೋಗಗಳ ಸಮಸ್ಯೆ ನಿವಾರಿಸುವ ಕ್ರಮವನ್ನು ವಿವರಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರಾದ ಶಶಿಕಾಂತ ಕೋಟಿಮನಿ ಅವರು ಸಂದರ್ಭೋಚಿತವಾಗಿ ಮಾತನಾಡಿದರು. ಕಾರ್ಯಾಗಾರದಲ್ಲಿ ಗದಗ ಜಿಲ್ಲೆಯ ತೋಟಗಾರಿಕೆ ಇಲಾಖೆಯ ಎಲ್ಲ ತಾಂತ್ರಿಕ ಅಧಿಕಾರಿಗಳು ಪಾಲ್ಗೊಂಡಿದ್ದರು.

# ಶ್ರೀರಾಮಕೃಷ್ಣ ಆಶ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಎಪಿಎಂಸಿ ಆವರಣದಲ್ಲಿರುವ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ಶರನ್ನವರಾತ್ರಿ ಉತ್ಸವದ ಅಂಗವಾಗಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಚಿಕ್ಕಟ್ಟಿಯ ಶಾಲಾ ವಿದ್ಯಾರ್ಥಿಗಳಿಂದ ನೃತ್ಯ ಹಾಗೂ ಶಿಕ್ಷಕಿಯರು ನವದುರ್ಗೆಯರ ದರ್ಶನ ರೂಪಕಗಳ ಮೂಲಕ ಜನಮನ ಸೆಳೆದರು.

ಈ ಸಂದರ್ಭದಲ್ಲಿ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದ ಪೂಜ್ಯಶ್ರೀ ಸ್ವಾಮಿ ಜಗನ್ನಾಥಾನಂದರವರು, ಚಿಕ್ಕಟ್ಟಿ ಸಮೂಹ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎಸ್.ವೈ. ಚಿಕ್ಕಟ್ಟಿ ಮುಂತಾದವರು ಉಪಸ್ಥಿತರಿದ್ದರು. ನಿವೃತ್ತ ಉಪನ್ಯಾಸಕ ಎಸ್.ಎಚ್. ದೇಶಪ್ಪನವರು ಕಾರ್ಯಕ್ರಮ ನಿರೂಪಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka